ಸಂಪುಟ: 01 VOLUVE 01 | ಸಂಚಿಕೆ: 54 ISSUE: 54 | ಪುಟ: 06 PAGE: 06 | ಶನಿವಾರ 05–09–2026 SATURDAY 05–09–2026
VD
REG-PRGI NO KNKAN/26/A5239 ಮೋ: 9880010077
vkbharath25@gmail.com

# ವಿಜಯ ದುಂಬಿ

VIJAYA DUMBI KANNADA DAILY ವಿಶ್ವಾಸದ ಕನ್ನಡಿ ಕನ್ನಡ ದಿನಪತ್ರಿಕೆ Rs.3/-

2 ಸಾರ್ವಜನಿಕ ಸಂಚಾರಕ್ಕೆ ತೊಡಕಾದ ಅಡ್ಡಗೋಡೆ: ತೆರವಿಗೆ ತಹಸೀಲ್ದಾರ್‌ಗೆ ಊಟಿ ಗ್ರಾಮಸ್ಥರ ಮನವಿ

4 ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು: ಸಚಿವ ಕೆ.ಹೆಚ್.ಮುನಿಯಪ್ಪ

6 ಕೆ.ಎಂ.ಇ.ಆರ್.ಸಿ. ಅಡಿ ಜಿಲ್ಲೆಗೆ ರೂ.3,574 ಕೋಟಿ ಅನುದಾನ ಅನುಮೋದನೆ ; ನಿರ್ಗಮಿತ ಜಿಲ್ಲಾಧಿಕಾರಿ ಟಿ. ವೆಂಕಟೇಶ್



VIJAYA DUMBI
KANNADA DAILY NEWS PAPER
ಶನಿವಾರ 05 ಸೆಪ್ಟೆಂಬರ್ 2026

# ಪ್ರಮುಖ ಫ್ಲೈಓವರ್‌ಗಳಲ್ಲಿ ವಾಹನಗಳ ಸಂಚಾರ ನಿಷೇಧ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ನಗರದಲ್ಲಿ ಸುಗಮ ಸಂಚಾರ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಕಾಯ್ದುಕೊಳ್ಳುವ ಹಿತದೃಷ್ಟಿಯಿಂದ ರಾಜಧಾನಿಯ ನಾಲ್ಕು ಪ್ರಮುಖ ಮೇಲ್ಸೇತುವೆಗಳಲ್ಲಿ (ಫ್ಲೈಓವರ್) ವಿವಿಧ ಮಾದರಿಯ ವಾಹನಗಳ ಸಂಚಾರವನ್ನು ನಿಷೇಧಿಸಿ ಬೆಂಗಳೂರು ಸಂಚಾರ ಪೊಲೀಸರು ಆದೇಶ ಹೊರಡಿಸಿದ್ದಾರೆ.**

ಮೈಸೂರು ರಸ್ತೆ ಬಿಜಿಎಸ್ ಫ್ಲೈಓವರ್ ಹಾಗೂ




ಸಿಲ್ಕ್ ಬೋರ್ಡ್, ರಾಗಿಗುಡ್ಡ, ಡಬಲ್ ಡೆಕರ್ ಫ್ಲೈಓವರ್: ಭಾರಿ ಸರಕು ಸಾಗಣೆ ವಾಹನಗಳ ಸಂಚಾರವನ್ನು 24 ಗಂಟೆಯೂ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಮೂರು ಚಕ್ರದ ಸರಕು ಆಟೋಗಳು ಸೇರಿದಂತೆ ಇತರ ಸರಕು ಸಾಗಣೆ ವಾಹನಗಳಿಗೆ ಬೆಳಿಗ್ಗೆ 7ರಿಂದ 11 ಹಾಗೂ ಸಂಜೆ 4ರಿಂದ ರಾತ್ರಿ 10ರವರೆಗೆ ಪ್ರವೇಶಾವಕಾಶ ಇರುವುದಿಲ್ಲ. ಪ್ರಯಾಣಿಕರ ಆಟೋ ರಿಕ್ಷಾ ಹಾಗೂ ಮೂರು ಚಕ್ರದ ಸರಕು ಆಟೋಗಳ ಸಂಚಾರವನ್ನು ಇಡೀ ದಿನ ನಿಷೇಧಿಸಲಾಗಿದೆ. ಭಾರಿ ಮತ್ತು ಮಧ್ಯಮ ಮಾದರಿಯ ಸರಕು ವಾಹನಗಳಿಗೆ ಬೆಳಿಗ್ಗೆ 7ರಿಂದ 11 ಹಾಗೂ ಸಂಜೆ 4ರಿಂದ ರಾತ್ರಿ 10ರವರೆಗೆ ನಿರ್ಬಂಧ ವಿಧಿಸಲಾಗಿದೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ ಫ್ಲೈಓವರ್ (ಸಂಜೀವನಗರ ಕ್ರಾಸ್‌ನಿಂದ ವಿದ್ಯಾವಿಲಾಸ ಜಂಕ್ಷನ್‌ವರೆಗೆ) ದ್ವಿಚಕ್ರ ವಾಹನ ಹಾಗೂ ಆಟೋ ರಿಕ್ಷಾಗಳ ಸಂಚಾರವನ್ನು ಸಂಪೂರ್ಣವಾಗಿ (24 ಗಂಟೆ) ತಡೆಯಲಾಗಿದೆ. ಎಲ್ಲಾ ರೀತಿಯ ಸರಕು ವಾಹನಗಳಿಗೆ ಬೆಳಿಗ್ಗೆ 6ರಿಂದ ರಾತ್ರಿ 10ರವರೆಗೆ ಪ್ರವೇಶ ನಿಷೇಧಿಸಲಾಗಿದೆ. ಈ ನಿಯಮಗಳ ಉಲ್ಲಂಘನೆಯನ್ನು ತಡೆಯಲು ಸಿಟಿವಿ ಕ್ಯಾಮೆರಾಗಳ ಮೂಲಕ ಕಟ್ಟುನಿಟ್ಟಿನ ಕಣ್ಗಾವಲು ಇರಿಸಲಾಗಿದ್ದು, ಸಾರ್ವಜನಿಕರು ಹಾಗೂ ಚಾಲಕರು ಸಂಚಾರ ಪೊಲೀಸರೊಂದಿಗೆ ಸಹಕರಿಸಬೇಕಾಗಿ ವಿನಂತಿಸಲಾಗಿದೆ.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜಾಲಹಳ್ಳಿ ಸರ್ವೆ ನಂ.132ರ ಬಡಾವಣೆಗೆ ಗ್ರಾಪಂ ಅಧ್ಯಕ್ಷರು, ಪಿಡಿಒ ಭೇಟಿ

## ರಸ್ತೆ–ಚರಂಡಿ ವ್ಯವಸ್ಥೆ ಕಲ್ಪಿಸದಿದ್ದರೆ ಎರಡು ದಿನಗಳ ಬಳಿಕ ಪೊಲೀಸ್ ಪ್ರಕರಣ: ಪಿಡಿಒ ಲಕ್ಷ್ಮಿ ಎಚ್ಚರಿಕೆ

**ವಿಜಯ ದುಂಬಿ ಸುದ್ದಿ....**

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಸರ್ವೆ ನಂ.132ರ ಬಡಾವಣೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯ ನಡುವೆಯೇ ಮನೆಗಳ ನಿರ್ಮಾಣ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಅಧಿಕಾರಿಗಳು ಶುಕ್ರವಾರ ಬಡಾವಣೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಡಾವಣೆಯಲ್ಲಿ ರಸ್ತೆ, ಚರಂಡಿ ಹಾಗೂ ವಿದ್ಯುತ್ ಕಂಬಗಳ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳ ಕೊರತೆ ಇದೆ ಎಂದು ಸಾರ್ವಜನಿಕರು ದೂರು ನೀಡಿದ್ದರು. ಅಲ್ಲದೆ, ಗಾರ್ಡನ್ ಹಾಗೂ ರಸ್ತೆ ನಿರ್ಮಾಣಕ್ಕಾಗಿ ಮೀಸಲಿಟ್ಟಿರುವ ಜಾಗಗಳನ್ನು ಒತ್ತುವರಿ ಮಾಡಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಸ್ಥಳಕ್ಕೆ ತೆರಳಿ ಬಡಾವಣೆಯ ಸ್ಥಿತಿಗತಿಗಳನ್ನು ಪರಿಶೀಲಿಸಿದರು. ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೆ ನಿವೇಶನಗಳ ಅಭಿವೃದ್ಧಿ ಹಾಗೂ ಮನೆಗಳ ನಿರ್ಮಾಣ ನಡೆಯುತ್ತಿರುವ ಕುರಿತು ಅಧಿಕಾರಿಗಳು ಪರಿಶೀಲನೆ ನಡೆಸಿದರು.



### ‘ಕೂಡಲೇ ಮೂಲಸೌಕರ್ಯ ಕಲ್ಪಿಸಲು ಕ್ರಮ”

**ಗ್ರಾಮ ಪಂಚಾಯಿತಿ ಸದಸ್ಯ ಮಕ್ತುಮ್ ಪರಾಶಿ ಮಾತನಾಡಿ, “ಬಡಾವಣೆಯಲ್ಲಿ ರಸ್ತೆ, ಚರಂಡಿ ಹಾಗೂ ವಿದ್ಯುತ್ ಕಂಬಗಳ ವ್ಯವಸ್ಥೆ ಇಲ್ಲದೆ ಮನೆಗಳ ನಿರ್ಮಾಣ ನಡೆಯುತ್ತಿದೆ. ಈ ಹಿಂದೆ ಡಿವೈಎಫ್‌ಐ ಹೋರಾಟದ ಸಂದರ್ಭದಲ್ಲಿ ಸಮಸ್ಯೆಯನ್ನು ಪ್ರಸ್ತಾಪಿಸಲಾಗಿತ್ತು. ಅದರ ಪರಿಣಾಮವಾಗಿ ಇದೀಗ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದಾರೆ. ಕೂಡಲೇ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಒ ಅವರು ಭರವಸೆ ನೀಡಿದ್ದಾರೆ,” ಎಂದು ತಿಳಿಸಿದರು**

ಈ ಹಿಂದೆ ಡಿವೈಎಫ್‌ಐ ವತಿಯಿಂದ ನಡೆದ 16 ದಿನಗಳ ಹೋರಾಟದಲ್ಲಿಯೂ ಬಡಾವಣೆಯ ಮೂಲಭೂತ ಸೌಕರ್ಯಗಳ ಸಮಸ್ಯೆಯನ್ನು ಪ್ರಸ್ತಾಪಿಸಲಾಗಿತ್ತು. ಇದೀಗ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಕ್ರಮಕ್ಕೆ ಮುಂದಾಗಿರುವುದು ಸಾರ್ವಜನಿಕರಲ್ಲಿ ನಿರೀಕ್ಷೆ ಮೂಡಿಸಿದೆ. ಈ ಸಂದರ್ಭದಲ್ಲಿ ಊರಿನ

**ಬಡಾವಣೆ ಮಾಲೀಕರಿಗೆ ಗ್ರಾಮ ಪಂಚಾಯಿತಿ ವತಿಯಿಂದ ಈಗಾಗಲೇ ಮೂರು ಬಾರಿ ನೋಟಿಸ್ ನೀಡಿದ್ದರೂ, ಇದುವರೆಗೂ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಿಲ್ಲ ಎಂದು ಪಿಡಿಒ ಶ್ರೀಮತಿ ಲಕ್ಷ್ಮಿ ತಿಳಿಸಿದ್ದಾರೆ.**

**ಇದೀಗ ಬಡಾವಣೆ ಮಾಲೀಕರಿಗೆ ಮತ್ತೆರಡು ದಿನಗಳ ಕಾಲಾವಕಾಶ ನೀಡಲಾಗಿದೆ. ಈ ಅವಧಿಯಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸದಿದ್ದರೆ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಪಿಡಿಒ ಲಕ್ಷ್ಮಿ ಅವರು ದೂರವಾಣಿ ಮೂಲಕ ಬಡಾವಣೆ ಮಾಲೀಕರಿಗೆ ಎಚ್ಚರಿಕೆ ನೀಡಿದ್ದಾರೆ.**

ಮುಖಂಡರಾದ ಶ್ರೀಧರ್ ದೇಸಾಯಿ, ದುರುಗಪ್ಪ ರಾಮಪಾಳಿ, ಬಾಬಾ ಮೆಡಿಕಲ್, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ್ ಅರಕೇರಿ, ಸದಸ್ಯರಾದ ಮಕ್ತುಮ್ ಪರಾಶಿ, ಕುಮಾರ್ ಚಪ್ಪಳಕಿ, ಪಿಡಿಒ ಶ್ರೀಮತಿ ಲಕ್ಷ್ಮಿ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಅಯ್ಯಪ್ಪ, ಬಿಲ್ ಕಲೆಕ್ಟರ್ ವೆಂಕೋಬ, ಸಿಬ್ಬಂದಿ ಬಸವರಾಜ್ ಹಾಗೂ ಮುಖಂಡರಾದ ಮೌನೇಶ್ ಚಪ್ಪಳಕಿ, ಅಮನ್ ಖುರೇಶಿ, ದಾದು, ಆರಿಫ್ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# 2028ರಲ್ಲಿ ಬಳ್ಳಾರಿ ಜಿಲ್ಲೆಯ 10 ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು: ಜನಾರ್ದನ ರೆಡ್ಡಿ

**ವಿಜಯ ದುಂಬಿ ಸುದ್ದಿ....**

**ಸಿರುಗುಪ್ಪ: 2028ರ ವಿಧಾನಸಭಾ ಚುನಾವಣೆಯಲ್ಲಿ ಅಖಂಡ ಬಳ್ಳಾರಿ ಜಿಲ್ಲೆಯ 10 ಕ್ಷೇತ್ರಗಳಲ್ಲೂ ಬಿಜೆಪಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಮಾಜಿ ಸಚಿವ ಜನಾರ್ದನ ರೆಡ್ಡಿ ವಿಶ್ವಾಸ ವ್ಯಕ್ತಪಡಿಸಿದರು.**

ತೆಕ್ಕಲಕೋಟೆ ಪಟ್ಟಣದ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ನಿವಾಸದ ಆವರಣದಲ್ಲಿ ಬುಧವಾರ ನಡೆದ ಬಿಜೆಪಿ ಪಾದಯಾತ್ರೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಯುವಕರು, ಮಹಿಳೆಯರು, ರೈತರು ಹಾಗೂ ಬಡವರಿಗೆ ಸೇರಬೇಕಿದ್ದ ಹಣ ದುರ್ಬಳಕೆಯಾಗಿದೆ. ಈ ಹಣವನ್ನು ತೆಲಂಗಾಣ ಮತ್ತು ಸಂಡೂರು ಚುನಾವಣೆಗಳಿಗೆ ಬಳಸಲಾಗಿದೆ ಎಂದು ಅವರು ಕಾಂಗ್ರೆಸ್ ಸರ್ಕಾರದ ವಿರುದ್ಧ ಆರೋಪಿಸಿದರು.

‘ಕಾಂಗ್ರೆಸ್ ಪಕ್ಷ ನನ್ನನ್ನು 14 ವರ್ಷಗಳ ಕಾಲ ಬಳ್ಳಾರಿಯಿಂದ ದೂರವಿಟ್ಟಿತ್ತು. ಜನಾರ್ದನ ರೆಡ್ಡಿ ಬಳ್ಳಾರಿಯಲ್ಲಿ ಇರಬಾರದು ಎಂಬ ಕಾರಣಕ್ಕೆ ಜೈಲಿಗೆ ಕಳುಹಿಸಲಾಯಿತು. ನಾನು ಹೊರಗಿದ್ದರೆ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಾಧ್ಯವಿಲ್ಲ ಎಂಬ ಭಯ ಕಾಂಗ್ರೆಸ್ ನಾಯಕರಲ್ಲಿತ್ತು’ ಎಂದರು. ಡಿ.ಕೆ ಶಿವಕುಮಾರ್ ಅವರು ಎರಡು ತಿಂಗಳು ಜೈಲಿನಲ್ಲಿದ್ದ ಸಂದರ್ಭದಲ್ಲಿ ತಮಗಾದ ಕಷ್ಟಗಳನ್ನು ಹೇಳಿಕೊಂಡಿದ್ದರು. ಆದರೆ ತಾವು 43 ತಿಂಗಳು ಜೈಲಿನಲ್ಲಿದ್ದ ವಿಚಾರವನ್ನು ಅವರು ಮರೆತಿದ್ದಾರೆ ಎಂದು ಜನಾರ್ದನ ರೆಡ್ಡಿ ವ್ಯಂಗ್ಯವಾಡಿದರು.

ಕಾಂಗ್ರೆಸ್ ನಾಯಕರು ತಮ್ಮನ್ನು ಪಕ್ಷಕ್ಕೆ ಕರೆತರಲು ಪ್ರಯತ್ನಿಸಿದ್ದರು. ಇಲ್ಲವಾದರೆ ಗಣಿಗಾರಿಕೆ ಬಂದ್ ಮಾಡಿ ಬಂಧಿಸಬೇಕು ಎಂಬ ಚರ್ಚೆ ನಡೆದಿತ್ತು ಎಂದು ಅವರು ಹೇಳಿದರು. ಸುಷ್ಮಾ ಸ್ವರಾಜ್ ಅವರಿಗೆ ದ್ರೋಹ ಮಾಡಿ ಬಿಜೆಪಿ ಪಕ್ಷಕ್ಕೆ ಬೆನ್ನಿಗೆ ಚೂರಿ ಹಾಕುವುದಿಲ್ಲ ಎಂದು ಆಗಲೇ ಸ್ಪಷ್ಟಪಡಿಸಿದ್ದಾಗಿ ತಿಳಿಸಿದರು.

‘ಬರ ಪರಿಸ್ಥಿತಿಯಲ್ಲಿ ಶಾಸಕ ಸ್ಪಂದಿಸಿಲ್ಲ’ : ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ ಮಾತನಾಡಿ, ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎಂಬುದಕ್ಕೆ ಶಾಸಕ ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದೇ ಸಾಕ್ಷಿ ಎಂದು ಆರೋಪಿಸಿದರು.

ಸಿರುಗುಪ್ಪ ತಾಲೂಕಿನಲ್ಲಿ ಬರ ಪರಿಸ್ಥಿತಿ




ಇದ್ದರೂ ಶಾಸಕ ಜನರ ನೆರವಿಗೆ ಬಂದಿಲ್ಲ. ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ತಾವು ಈಗಾಗಲೇ ಒತ್ತಾಯಿಸಿದ್ದೇವೆ. ಆದರೆ ಹಚ್ಚೊಳ್ಳಿ ಹೋಬಳಿಯನ್ನು ಹೊರತುಪಡಿಸಿ ಉಳಿದ ಪ್ರದೇಶವನ್ನು ಬರಪೀಡಿತವೆಂದು ಘೋಷಿಸುವಂತೆ ಕಂದಾಯ ಸಚಿವರಿಗೆ ಮನವಿ ಸಲ್ಲಿಸಿರುವುದು ಈ ಭಾಗಕ್ಕೆ ಅನ್ಯಾಯವಾಗಿದೆ ಎಂದು ದೂರಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ತಾಲೂಕು ಘಟಕದ ಅಧ್ಯಕ್ಷ ಕೆ. ಮಲ್ಲಿಕಾರ್ಜುನಸ್ವಾಮಿ, ಕೆ.ಎಸ್. ದಿವಾಕರ, ದಮ್ಮೂರು ಶೇಖರ್, ಹನುಮಂತಪ್ಪ, ನಿಟ್ಟೂರು ಮರೇಗೌಡ, ಶರಣ ಬಸವ, ಮೇಕಲಿ ವೀರೇಶ, ಬಿ. ದೊಡ್ಡಯ್ಯ, ಚಾಗಿ ಸುಬ್ಬಯ್ಯ, ವೀರನಗೌಡ ಸೇರಿದಂತೆ ಕಾರ್ಯಕರ್ತರು ಇದ್ದರು.

# ಕೃಷ್ಣ ಜನ್ಮಾಷ್ಟಮಿ : ರಾಷ್ಟ್ರಪತಿ,ಪ್ರಧಾನಿ ಸೇರಿ ಗಣ್ಯರ ಶುಭಾಶಯ

**ವಿಜಯ ದುಂಬಿ ಸುದ್ದಿ....**

**ನವದೆಹಲಿ: ಕೃಷ್ಣ ಜನ್ಮಾಷ್ಟಮಿಯ ಶುಭ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಹಲವು ಪ್ರಮುಖ ನಾಯಕರು ದೇಶದ ಜನತೆಗೆ ಹೃತ್ಪೂರ್ವಕ ಶುಭಾಶಯಗಳನ್ನು ಕೋರಿದ್ದಾರೆ.**



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾಮಾಜಿಕ ಮಾಧ್ಯಮ 'ಎಕ್ಸ್' ನಲ್ಲಿ ಪೋಸ್ಟ್ ಮಾಡಿ, “ಭಗವಾನ್ ಶ್ರೀಕೃಷ್ಣನ ದಿವ್ಯ ಸಂದೇಶಗಳಲ್ಲಿ ನಿಷ್ಕಾಮ ಕರ್ಮದ (ಫಲಾಪೇಕ್ಷೆಯಿಲ್ಲದ ಕರ್ತವ್ಯ) ಪ್ರೇರಣೆಯಿದೆ. ಇದು ಮಾನವಕುಲಕ್ಕೆ ಸದಾ ದಾರಿದೀಪವಾಗಿದೆ. ಭಕ್ತಿ ಮತ್ತು ಆರಾಧನೆಗೆ ಸಮರ್ಪಿತವಾದ ಈ ಪವಿತ್ರ ಹಬ್ಬವು ಎಲ್ಲರ ಜೀವನದಲ್ಲೂ ಧನಾತ್ಮಕ ಶಕ್ತಿ ಮತ್ತು ಶಕ್ತಿಯನ್ನು ತುಂಬಲಿ” ಎಂದು ಹಾರೈಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಸಂದೇಶದಲ್ಲಿ, “ಭಗವಾನ್ ಶ್ರೀಕೃಷ್ಣನ ಜೀವನ ಮತ್ತು ಬೋಧನೆಗಳು ಭಾರತೀಯ ಸಂಸ್ಕೃತಿ ಮತ್ತು ತತ್ತ್ವಶಾಸ್ತ್ರಕ್ಕೆ ಹೊಸ ಚೈತನ್ಯವನ್ನು ತುಂಬುತ್ತವೆ. ಅವರು ಸತ್ಯ, ಧರ್ಮ, ನ್ಯಾಯ ಮತ್ತು ಕರುಣೆಯ ಹಾದಿಯನ್ನು ತೋರಿಸಿದ್ದಾರೆ. ಕೃಷ್ಣನ ಆದರ್ಶಗಳನ್ನು ಅಳವಡಿಸಿಕೊಳ್ಳುವ ಮೂಲಕ ಸಮಗ್ರ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲು ನಾವೆಲ್ಲರೂ ಸಂಕಲ್ಪ ಮಾಡೋಣ” ಎಂದು ಕರೆ ನೀಡಿದ್ದಾರೆ.

# ಇಂದು ಸೀರತ್ ಸಾರ್ವಜನಿಕ ಸಮಾರಂಭ

**ವಿಜಯ ದುಂಬಿ ಸುದ್ದಿ....**

**ತಾಳಿಕೋಟಿ : ಜಮಾಅತೆ ಇಸ್ಲಾಮಿ ಹಿಂದ್ ರಾಜ್ಯ ಘಟಕವು ಆಗಸ್ಟ್ 26 ರಿಂದ ಸೆಪ್ಟಂಬರ್ 06 ವರೆಗೆ ಹಮ್ಮಿಕೊಂಡ ರಾಜ್ಯಮಟ್ಟದ ಅಭಿಯಾನದ ಅಂಗವಾಗಿ ಸ್ಥಳೀಯ ನಗರ ಶಾಖೆಯು ಇಂದು ಸೆ.5 ಶನಿವಾರ ದಂದು ಸರ್ವಧರ್ಮೀಯರಿಗಾಗಿ ಸೀರತ್ ಸಮಾರಂಭವನ್ನು ಹಮ್ಮಿಕೊಂಡಿದೆ.**

ಇಂದು ಪಟ್ಟಣದ ಶ್ರೀ ವಿಠ್ಠಲ ಮಂದಿರದಲ್ಲಿ ಸಂಜೆ 7.30 ಗಂಟೆಗೆ ನಡೆಯಲಿರುವ ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ತಾಳಿಕೋಟೆ ಶ್ರೀ ಖಾಸ್ಗತೇಶ್ವರ ಮಠದ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು, ವಿಪಿಎಂ ಶಾಲೆ




ಮುಖ್ಯಸ್ಥರಾದ ಫಾದರ್ ಸುನೀಲ ಅಂದ್ರಾದೆ, ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ್ ಅಹ್ಮದ್ ಖಾಜಿ ಅವರು ವಹಿಸುವರು.

ಮುಖ್ಯ ಅತಿಥಿಗಳಾಗಿ ಮುದ್ದೇಬಿಹಾಳ ಮತಕ್ಷೇತ್ರ ಶಾಸಕರಾದ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಆಗಮಿಸುವರು. ನಾಡಿನ ಖ್ಯಾತ ಲೇಖಕರಾದ ಯೋಗೇಶ ಮಾಸ್ಟರ್, ಬೆಂಗಳೂರು ವಿಶೇಷ ಆಹ್ವಾನಿತರಾಗಿರುವರು. ಪ್ರವಚನಕಾರ ಲಾಲಹುಸೇನ ಕಂದಗಲ್ಲ ವಿಶೇಷ ಉಪನ್ಯಾಸ ನೀಡುವರು.

ಜಮಾಅತೆ ಇಸ್ಲಾಮಿ ಹಿಂದ್ ವಲಯ ಸಂಚಾಲಕ ಮೌಲಾನಾ ಅಬ್ದುಲ್ ಖಾದೀರ ಸೌದಾಘರ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ವಿ.ವಿ.ಸಂಘದ ಅಧ್ಯಕ್ಷ ವಿ.ಸಿ. ಹಿರೇಮಠ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಾ. ಪ್ರಭುಗೌಡ ಲಿಂಗದಳ್ಳಿ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ. ವಿ.ಎಸ್. ಕಾರ್ಚಿ, ಬಿಜೆಪಿ ಜಿಲ್ಲಾ ಮಾಜಿ ಅಧ್ಯಕ್ಷ ಆರ್.ಎಸ್. ಪಾಟೀಲ (ಕೂಚಬಾಳ), ಕದಳಿ ವೇದಿಕೆ ತಾಳಿಕೋಟೆ ತಾಲೂಕ ಅಧ್ಯಕ್ಷೆ ಉಮಾ ಬಸವರಾಜ ಸಾಲಂಕಿ, ಜ.ಇ.ಹಿ. ಮಹಿಳಾ ವಿಭಾಗದ ಸಂಚಾಲಕಿ ಖುರ್ಶಿದ ಮೊಮೀನ ಹಾಗೂ ಇತರರು ಆಗಮಿಸುವರು.

ಈ ಭಾವೈಕ್ಯತಾ ಸಮಾರಂಭದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅಭಿಯಾನದ ಸಂಚಾಲಕ ಎಂ.ಎ. ಮೇತ್ರಿ (ಇಂಜಿನಿಯರ್) ಹಾಗೂ ಉಪ ಸಂಚಾಲಕ ಹುಸೇನ ಪಟೇಲ ಪ್ರಕಟಣೆಯಲ್ಲಿ ಕೋರಿದ್ದಾರೆ.

# ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ವಿತರಕರಿಗೆ ಸನ್ಮಾನಿಸಿ ಅಭಿನಂದಿಸಿದ: ಪತ್ರಕರ್ತ ವೀರೇಶ ಗಡ್ಡಿಮಾಳ

**ವಿಜಯ ದುಂಬಿ ಸುದ್ದಿ....**

**ಪತ್ರಿಕಾ ವಿತರಕರು ಎಂದರೆ ಶ್ರಮಜೀವಿಗಳು ಮಳೆ, ಚಳಿ, ಗಾಳಿ, ಎನ್ನದೆ ಪ್ರತಿದಿನವೂ ಬೆಳಗಿನ ಜಾವದಲ್ಲಿ ಸಮಾಜದ ಕಣ್ಣನ್ನು ತೆರೆಸುವ ಸುದ್ದಿಯನ್ನು ಹೊತ್ತು ಹೋಯ್ದು, ಮನೆಮನೆಗೆ ತೆರಳಿ ಪತ್ರಿಕೆ ಹಂಚಿ ಸುದ್ದಿ ಮುಟ್ಟಿಸುವ ಕಾಯಕದಲ್ಲಿ ತೊಡಗಿರುವ ವಿತರಕರಿಗೆ ಪತ್ರಕರ್ತ ವೀರೇಶ ಗಡ್ಡಿಮಾಳ ಅವರಿಂದ ಸನ್ಮಾನಿಸಿ ಗೌರವಿಸಿರುವುದು ಶ್ಲಾಘನೀಯವಾದದು ಎಂದು ಬಿಜೆಪಿ ಮುಖಂಡ ಕೆ.ಕರಿಯಪ್ಪ ಹೇಳಿದರು.**



ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಶುಕ್ರವಾರ ಸೆ.4 ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯ ಅಂಗವಾಗಿ ಭಾಗವಹಿಸಿ ವಿತರಕರಿಗೆ ಸನ್ಮಾನಿಸಿ ಮಾತನಾಡಿದ ಅವರು, ಈ ಜಗತ್ತಿಗೆ ಸುದ್ದಿ ಕೊಡುವ ಪತ್ರಿಕೆಗಳು ಎಷ್ಟು ಮುಖ್ಯವೋ ಅಷ್ಟೇ ಪತ್ರಿಕಾ ವಿತರಕರು ಕೂಡ ಮುಖ್ಯ, ಅವರಿಲ್ಲದಿದ್ದರೆ, ಪತ್ರಿಕೆಗಳನ್ನು ಮನೆಮನೆಗೆ ತೆರಳಿ ಹಂಚುವುದು ಕಷ್ಟ, ಹೀಗಾಗಿ ಸರ್ಕಾರ ಅವರಿಗೆ ಮೂಲಭೂತ ಸೌಕರ್ಯಗಳು, ವಿಮೆ, ಒದಗಿಸಬೇಕು. ಜೊತೆಗೆ ಪತ್ರಿಕಾ ಸಂಸ್ಥೆಗಳು ಏಜೆಂಟರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅವರಿಗೆ ಹೆಚ್ಚಿನ ಆದಾಯ ಅಥವಾ ಕಮಿಷನ್ ಸಿಗುವಹಾಗೆ ನೋಡಿಕೊಳ್ಳಬೇಕೆಂದರು.

ಇದೇ ವೇಳೆ ಪತ್ರಿಕಾ ಏಜೆಂಟರು, ವಿತರಕರು, ಸೇರಿ 35 ಜನರಿಗೆ ಸನ್ಮಾನಿಸಿ, ಗೌರವಿಸಿ, ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ: ಹಿರಿಯ ಪತ್ರಕರ್ತರಾದ ಡಿ. ಎಚ್.ಕಂಬಳಿ, ಪ್ರಲ್ಹಾದ್ ಗುಡಿ, ಏಜೆಂಟರಾದ ಕೊಟ್ಟೂರಯ್ಯಸ್ವಾಮಿ, ಸೋಮನಾಥ, ಅಮರೇಶ, ನಜೀರ್ ಅಲಿ, ಅಮರೇಶ ಬಕ್ ಸ್ಟಾಲ್, ನಾಗಭೂಷಣ, ಮಲ್ಲಿಕಾರ್ಜುನಯ್ಯಸ್ವಾಮಿ, ಸೇರಿದಂತೆ ವಿತರಕರು ಇದ್ದರು.

# ಶಾಸಕ ಹಂಪನಗೌಡ ಬಾದರ್ಲಿ ಅವರ ನಿರಂತರ ಒತ್ತಾಯಕ್ಕೆ ಫಲ ರೈತಾಪಿ ವರ್ಗದಲ್ಲಿ ಹರ್ಷ

**ವಿಜಯ ದುಂಬಿ ಸುದ್ದಿ....**

**ಸಿಂಧನೂರು: ಮಳೆ ಕೊರತೆ ಹಾಗೂ ಪ್ರತಿಕೂಲ ಹವಾಮಾನದಿಂದ ಸಂಕಷ್ಟಕ್ಕೆ ಸಿಲುಕಿದ್ದ ಸಿಂಧನೂರು ತಾಲೂಕಿನ ರೈತರ ಬಹುದಿನಗಳ ನಿರೀಕ್ಷೆಗೆ ಇದೀಗ ಸರ್ಕಾರದ ನಿರ್ಧಾರದಿಂದ ಆಶಾಕಿರಣ ಮೂಡಿದೆ. ಸಿಂಧನೂರು ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವಂತೆ ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ನಿರಂತರವಾಗಿ ಒತ್ತಾಯಿಸಿ, ತಾಲೂಕಿನ ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಮನವಿ ಮಾಡಿದ್ದ ಮಾನ್ಯ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಸಾಹೇಬರ ಪ್ರಯತ್ನಕ್ಕೆ ಫಲ ದೊರೆತಿದೆ.**

ಸಿಂಧನೂರು ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವ ಹಿನ್ನೆಲೆಯಲ್ಲಿ ತಾಲೂಕಿನ ರೈತಾಪಿ ವರ್ಗದಲ್ಲಿ ಸಂತಸ ವ್ಯಕ್ತವಾಗಿದೆ. ಕೃಷಿಯನ್ನೇ ಜೀವನಾಧಾರವನ್ನಾಗಿ ಮಾಡಿಕೊಂಡಿರುವ ಸಾವಿರಾರು ರೈತ ಕುಟುಂಬಗಳಿಗೆ ಈ ಘೋಷಣೆ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದ ನೆರವಿನ ನಿರೀಕ್ಷೆಯನ್ನು ಹೆಚ್ಚಿಸಿದೆ. ಸಮರ್ಪಕ ಮಳೆಯ ಕೊರತೆ, ಕೃಷಿ ಚಟುವಟಿಕೆಗಳಿಗೆ ಎದುರಾದ ಅಡಚಣೆ, ಬೆಳೆಗಳ ಮೇಲೆ ಉಂಟಾದ ಪರಿಣಾಮ, ಕೃಷಿ ವೆಚ್ಚದ ಹೆಚ್ಚಳ ಹಾಗೂ ಆದಾಯದಲ್ಲಿ ಕುಸಿತ ಸೇರಿದಂತೆ ಹಲವು ಸಮಸ್ಯೆಗಳನ್ನು ರೈತರು ಎದುರಿಸುತ್ತಿದ್ದಾರೆ. ಒಂದು ಕಡೆ ಬೀಜ, ರಸಗೊಬ್ಬರ, ಕೀಟನಾಶಕ, ಕಾರ್ಮಿಕರು ಹಾಗೂ ಕೃಷಿ ಯಂತ್ರೋಪಕರಣಗಳ ವೆಚ್ಚ ಹೆಚ್ಚಾಗುತ್ತಿದ್ದರೆ, ಮತ್ತೊಂದೆಡೆ ನಿರೀಕ್ಷಿತ ಪ್ರಮಾಣದಲ್ಲಿ ಬೆಳೆ ಬಾರದಿರುವುದು ರೈತರ ಆರ್ಥಿಕ ಪರಿಸ್ಥಿತಿಯ ಮೇಲೆ ಗಂಭೀರ ಪರಿಣಾಮ ಬೀರಿದೆ.

ಇಂತಹ ಸಂದರ್ಭದಲ್ಲಿ ತಾಲೂಕನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿರುವುದು ರೈತರಿಗೆ ಸರ್ಕಾರದಿಂದ ಅಗತ್ಯ ಪರಿಹಾರ ಹಾಗೂ



ವಿವಿಧ ಬರ ಪರಿಹಾರ ಕ್ರಮಗಳು ದೊರೆಯುವ ನಿರೀಕ್ಷೆಯನ್ನು ಮೂಡಿಸಿದೆ. ಬೆಳೆ ಹಾನಿ ಸಮೀಕ್ಷೆ, ಅರ್ಹ ರೈತರಿಗೆ ಪರಿಹಾರ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸೇರಿದಂತೆ ಬರ ಪರಿಸ್ಥಿತಿಯಿಂದ ಉಂಟಾಗುವ ಸಮಸ್ಯೆಗಳಿಗೆ ಸರ್ಕಾರದಿಂದ ಅಗತ್ಯ ಕ್ರಮಗಳು ಕೈಗೊಳ್ಳಬೇಕೆಂಬ ನಿರೀಕ್ಷೆ ರೈತರಲ್ಲಿದೆ. “ರೈತ ಉಳಿದರೆ ಮಾತ್ರ ಕೃಷಿ ಉಳಿಯುತ್ತದೆ; ಕೃಷಿ ಉಳಿದರೆ ಮಾತ್ರ ಗ್ರಾಮೀಣ ಆರ್ಥಿಕತೆ ಬಲವಾಗುತ್ತದೆ” ಎಂಬ ಆಶಯದೊಂದಿಗೆ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ಶಾಸಕ ಹಂಪನಗೌಡ ಬಾದರ್ಲಿ ಅವರ ನಿರಂತರ ಪ್ರಯತ್ನಕ್ಕೆ ರೈತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಬರಗಾಲ ಘೋಷಣೆಗೆ ಸಂಬಂಧಿಸಿದಂತೆ ಸರ್ಕಾರದ ಗಮನ ಸೆಳೆಯಲು ಶಾಸಕರು ಮುಖ್ಯಮಂತ್ರಿಗಳಿಗೆ ಪತ್ರದ ಮೂಲಕ ಮನವಿ ಸಲ್ಲಿಸಿ, ಸಿಂಧನೂರು ತಾಲೂಕಿನ ವಾಸ್ತವ ಪರಿಸ್ಥಿತಿಯನ್ನು ಸರ್ಕಾರದ ಗಮನಕ್ಕೆ ತಂದಿದ್ದರು. ರೈತರ ಸಂಕಷ್ಟದ ಸಂದರ್ಭದಲ್ಲಿ ಅವರ ಪರವಾಗಿ ಧ್ವನಿಯಾಗಿ, ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದ ಹಿನ್ನೆಲೆಯಲ್ಲಿ ಇದೀಗ ತಾಲೂಕು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆಯಾಗಿರುವುದು ಜನಪರ ಕಾಳಜಿಗೆ ದೊರೆತ ಮಹತ್ವದ ಜಯ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಈ ನಿರ್ಧಾರದಿಂದ ರೈತರಲ್ಲಿ ಸಂತಸ ಮನೆಮಾಡಿದ್ದು, “ನಮ್ಮ ಸಂಕಷ್ಟವನ್ನು ಸರ್ಕಾರದ ಗಮನಕ್ಕೆ ತಂದು ಬರಗಾಲ ಘೋಷಣೆಗೆ ನಿರಂತರವಾಗಿ ಪ್ರಯತ್ನಿಸಿದ ಶಾಸಕರಿಗೆ ಧನ್ಯವಾದಗಳು” ಎಂದು ರೈತರು ಹರ್ಷ ವ್ಯಕ್ತಪಡಿಸಿದ್ದಾರೆ. ಇನ್ನು ಮುಂದಿನ ದಿನಗಳಲ್ಲಿ ಬರಗಾಲದ ಹಿನ್ನೆಲೆಯಲ್ಲಿ ಅರ್ಹ ರೈತರಿಗೆ ತ್ವರಿತವಾಗಿ ಪರಿಹಾರ ದೊರೆಯಬೇಕು. ಬೆಳೆ ನಷ್ಟ ಅನುಭವಿಸಿರುವ ರೈತರನ್ನು ಗುರುತಿಸಿ ವೈಜ್ಞಾನಿಕವಾಗಿ ಬೆಳೆ ಹಾನಿ ಸಮೀಕ್ಷೆ ನಡೆಸಿ, ಅರ್ಹರಿಗೆ ಸೂಕ್ತ ಪರಿಹಾರ ನೀಡಬೇಕು. ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಜಾನುವಾರುಗಳಿಗೆ ಮೇವು ಹಾಗೂ ನೀರಿನ ವ್ಯವಸ್ಥೆ ಮಾಡಬೇಕು. ರೈತರ ಸಾಲ, ಕೃಷಿ ವೆಚ್ಚ ಹಾಗೂ ಬೆಳೆ ನಷ್ಟದ ಪರಿಸ್ಥಿತಿಯನ್ನು ಪರಿಗಣಿಸಿ ಸರ್ಕಾರದಿಂದ ಅಗತ್ಯ ನೆರವು ದೊರೆಯಬೇಕು ಎಂಬುದು ರೈತಾಪಿ ವರ್ಗದ ಪ್ರಮುಖ ಆಶಯವಾಗಿದೆ. ಸಿಂಧನೂರು ತಾಲೂಕಿನ ರೈತರ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದ ಗಮನ ಸೆಳೆದು ಬರಗಾಲ ಘೋಷಣೆಗೆ ಒತ್ತಾಯಿಸಿ ಯಶಸ್ವಿಯಾದ ಶಾಸಕ ಹಂಪನಗೌಡ ಬಾದರ್ಲಿ ಅವರ ಜನಪರ ಕಾಳಜಿಗೆ ಮತ್ತೊಂದು ಮಹತ್ವದ ಜಯ ದೊರೆತಂತಾಗಿದೆ.

ತಾಲೂಕಿನ ರೈತರ ಪರವಾಗಿ ಸ್ಪಂದಿಸಿ ಬರಗಾಲ ಘೋಷಣೆಗೆ ಕ್ರಮ ಕೈಗೊಂಡ ಮಾನ್ಯ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ಮಾನ್ಯ ಕಂದಾಯ ಸಚಿವರಿಗೆ ರೈತಾಪಿ ವರ್ಗದ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಸಲ್ಲಿಸಲಾಯಿತು.

# 4ನೇ ದಿನಕ್ಕೆ ಕಾಲಿಟ್ಟ ಬಿಜೆಪಿ ಪಾದಯಾತ್ರೆ

ವಿಜಯ ದುಂಬಿ ಸುದ್ದಿ....

**ರಾಯಚೂರು: ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನಡೆಯುತ್ತಿರುವ ಬಳ್ಳಾರಿ ಚಲೋ ಪಾದಯಾತ್ರೆ ಇಂದು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಕಳೆದ ಮೂರು ದಿನಗಳಲ್ಲಿ ಒಟ್ಟು 51 ಕಿ.ಮೀ. ಪಾದಯಾತ್ರೆ ಪೂರ್ಣಗೊಳಿಸಿರುವ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು,ಇಂದು ಸಿಂಧನೂರಿನಿಂದ ಕಾರಟಗಿಯವರೆಗೆ 22 ಕಿ.ಮೀ. ಹೆಜ್ಜೆ ಹಾಕಲಿದ್ದಾರೆ.**

ಸಿಂಧನೂರಿನ ಗಾಂಧಿ ಸರ್ಕಲ್‌ನಿಂದ ಇಂದು ಬೆಳಿಗ್ಗೆ 9 ಗಂಟೆಗೆ ಪಾದಯಾತ್ರೆ ಪುನರಾರಂಭವಾಗಿದ್ದು, ಇಂದಿನ ಪಾದಯಾತ್ರೆಯ ಸಂಪೂರ್ಣ ಜವಾಬ್ದಾರಿಯನ್ನು ಬಿಜೆಪಿ ಯುವ ಮೋರ್ಚಾ ವಹಿಸಿಕೊಂಡಿದೆ. ಶ್ರೀಕೃಷ್ಣ ಜನ್ಮಾಷ್ಟಮಿ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಗೋಪೂಜೆ ನೆರವೇರಿಸಿದ ಬಳಿಕ ಬಿ.ವೈ. ವಿಜಯೇಂದ್ರ ನಾಲ್ಕನೇ ದಿನದ ಪಾದಯಾತ್ರೆಗೆ ಚಾಲನೆ ನೀಡಿದರು. ಶಾಸಕ ಸುನಿಲ್ ಕುಮಾರ್, ಸಂಸದ ಗೋವಿಂದ ಕಾರಜೋಳ, ಮಾಜಿ ಸಚಿವ ಶ್ರೀರಾಮುಲು ಸೇರಿದಂತೆ ವಿಧಾನ ಪರಿಷತ್ ಸದಸ್ಯರು ಹಾಗೂ ಬಿಜೆಪಿ ರಾಜ್ಯ ಪದಾಧಿಕಾರಿಗಳು ಪಾದಯಾತ್ರೆಯಲ್ಲಿ ಭಾಗವಹಿಸಿದ್ದಾರೆ.

ಸಿಂಧನೂರು, ವಿಜಯನಗರ, ಗದಗ, ಕನಕಗಿರಿ, ಹಾವೇರಿ ಹಾಗೂ ಹುಬ್ಬಳ್ಳಿ-ಧಾರವಾಡ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಕಾರ್ಯಕರ್ತರು ಪಾದಯಾತ್ರೆಯಲ್ಲಿ ಭಾಗವಹಿಸಲಿದ್ದಾರೆ. ರಾಜ್ಯ ಸರ್ಕಾರದಿಂದ ವಿಧವಾ ವೇತನ, ವೃದ್ಧಾಪ್ಯ ವೇತನ ಸೇರಿದಂತೆ ವಿವಿಧ ಪಿಂಚಣಿಗಳನ್ನು ಸಮರ್ಪಕವಾಗಿ ಪಾವತಿಸಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಜೊತೆಗೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿಯಾಗದಿರುವುದನ್ನು ಖಂಡಿಸಿ ಇಂದಿನ ಹೋರಾಟ ನಡೆಸಲಾಗುತ್ತಿದೆ.

ಬಿಜೆಪಿ ಯುವ ಮೋರ್ಚಾ ಪಡೆ ಸೇರಿದಂತೆ ಪಕ್ಷದ ನೂರಾರು ಕಾರ್ಯಕರ್ತರು ನಾಲ್ಕನೇ ದಿನದ ಬಳ್ಳಾರಿ ಚಲೋ ಪಾದಯಾತ್ರೆಯಲ್ಲಿ ಭಾಗಿಯಾಗಿದ್ದಾರೆ.



ಬಡವರಿಂದ ಸರ್ಕಾರಕ್ಕೆ ಶಾಪ: ಬಿವೈವಿ ವಾಗ್ದಾಳಿ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ನಾಡಿನ ಬಡವರು, ಕೂಲಿ ಕಾರ್ಮಿಕರು, ರೈತರು ಹಾಗೂ ದುರ್ಬಲ ವರ್ಗಗಳಿಂದ ದೂರ ಸಾಗುತ್ತಿದೆ. ರಾಜ್ಯದ ಕಡುಬಡವರು ಸರ್ಕಾರಕ್ಕೆ ಶಾಪ ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಾಗ್ದಾಳಿ ನಡೆಸಿದರು. ಸಿಂಧನೂರಿನಲ್ಲಿ ಬಿಜೆಪಿ 4 ನೇ ದಿನದ ಪಾದಯಾತ್ರೆಗೆ ಚಾಲನೆ ನೀಡಿದ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪಂಚ ಗ್ಯಾರಂಟಿಗಳ ಭ್ರಮೆಯಲ್ಲಿ ತೇಲುತ್ತಿರುವ ಕಾಂಗ್ರೆಸ್ ಸರ್ಕಾರ ವಾಸ್ತವಿಕ ಸತ್ಯದಿಂದ ದೂರವಾಗಿದೆ ಎಂದು ಟೀಕಿಸಿದರು.

ವೃದ್ಧಾಪ್ಯ ವೇತನ, ಅಂಗವಿಕಲರ ಮಾಸಾಶನ ಸೇರಿದಂತೆ ಸಾಮಾಜಿಕ ಭದ್ರತಾ ಪಿಂಚಣಿಗಳು ಹಲವು ತಿಂಗಳುಗಳಿಂದ ಫಲಾನುಭವಿಗಳಿಗೆ ತಲುಪುತ್ತಿಲ್ಲ. ಕಳೆದ ಆರು ತಿಂಗಳಿಂದ ಮಾಸಾಶನ ಬಂದಿಲ್ಲ ಎಂದು ಫಲಾನುಭವಿಗಳೇ ಅಳಲು ತೋಡಿಕೊಳ್ಳುತ್ತಿದ್ದಾರೆ. ಕಡುಬಡವರ ಬದುಕಿಗೆ ಆಸರೆಯಾಗಬೇಕಾದ ಸರ್ಕಾರ ಅವರ ಸಂಕಷ್ಟಕ್ಕೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು. ಗಂಗಾ ಕಲ್ಯಾಣ ಯೋಜನೆಯ ಪ್ರಯೋಜನವೂ ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ದೊರೆಯುತ್ತಿಲ್ಲ. ಮನೆ ಇಲ್ಲದ ಬಡವರಿಗೆ ಮನೆಗಳನ್ನು ನಿರ್ಮಿಸಿಕೊಡುವಲ್ಲಿಯೂ ಸರ್ಕಾರ ವಿಫಲವಾಗಿದೆ. ಬಡವರ ಕಲ್ಯಾಣಕ್ಕಾಗಿ ನೀಡಬೇಕಾದ ಹಣವನ್ನೇ ಸಮಯಕ್ಕೆ ನೀಡಲು ಸಾಧ್ಯವಾಗದ ಸ್ಥಿತಿಗೆ ಕಾಂಗ್ರೆಸ್ ಸರ್ಕಾರ ತಲುಪಿದೆ ಎಂದು ವಿಜಯೇಂದ್ರ ಹೇಳಿದರು.

ರೈತರು, ಕೂಲಿ ಕಾರ್ಮಿಕರು, ವೃದ್ಧರು, ಅಂಗವಿಕಲರು ಸೇರಿದಂತೆ ಸಮಾಜದ ಎಲ್ಲ ವರ್ಗದ ಜನರನ್ನು ಸರ್ಕಾರ ನಿರ್ಲಕ್ಷ್ಯದಿಂದ ನೋಡುತ್ತಿದೆ. ಒಂದು ಕಡೆ ಗ್ಯಾರಂಟಿಗಳ ಪ್ರಚಾರದಲ್ಲಿ ಸರ್ಕಾರ ಮುಳುಗಿದ್ದರೆ, ಮತ್ತೊಂದೆಡೆ ನಾಡಿನ ಕಡುಬಡವರ ನೈಜ ಸಮಸ್ಯೆಗಳು ಕಡೆಗಣನೆಯಾಗಿವೆ ಎಂದು ದೂರಿದರು. ಕಾಂಗ್ರೆಸ್ ಸರ್ಕಾರ ನಾಡಿನ ಕಡುಬಡವರಿಗೆ ಶಾಪವಾಗಿ ಪರಿಣಮಿಸಿದೆ. ರಾಜ್ಯದ ಜನತೆ ಸರ್ಕಾರದ ಆಡಳಿತದಿಂದ ಬೇಸತ್ತಿದ್ದಾರೆ. ಗ್ಯಾರಂಟಿಗಳ ಭ್ರಮೆಯಿಂದ ಹೊರಬಂದು ಜನರ ವಾಸ್ತವಿಕ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

## ಶ್ರೀಕೃಷ್ಣ ಜನ್ಮಾಷ್ಟಮಿ: ಮಕ್ಕಳ ಪ್ರತಿಭೆಗೆ ವೇದಿಕೆಯಾದ ಶಾಲಾ ಕಾರ್ಯಕ್ರಮ

ವಿಜಯ ದುಂಬಿ ಸುದ್ದಿ....

**ಚಿಂಚೋಳಿ: ಶಾರದಾ ಶಾಲೆಯಲ್ಲಿ ಆಯೋಜಿಸಲಾದ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ ಕಾರ್ಯಕ್ರಮದಲ್ಲಿ ಮಾಜಿ ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಶ್ರೀಕೃಷ್ಣ ಜನ್ಮಾಷ್ಟಮಿ ಮಕ್ಕಳಿಗೆ ಅಚ್ಚುಮೆಚ್ಚಿನ ಹಬ್ಬವಾಗಿದ್ದು, ಸೌಹಾರ್ದತೆ, ಸಂಸ್ಕೃತಿ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವ ಹಬ್ಬವಾಗಿದೆ, ಶಾಲೆಗಳಲ್ಲಿ ಇಂತಹ ಸಾಂಸ್ಕೃತಿಕ ಹಾಗೂ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಮಕ್ಕಳ ಬೌದ್ಧಿಕ ಬೆಳವಣಿಗೆಗೆ ಉತ್ತೇಜನ ದೊರೆಯುವುದರ ಜೊತೆಗೆ ಕಲಿಕೆಯ ಸಾಮರ್ಥ್ಯವೂ ವೃದ್ಧಿಯಾಗುತ್ತದೆ. ಮಕ್ಕಳು ಮಹನೀಯರ ಆದರ್ಶಗಳು ಮತ್ತು ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಪ್ರಜೆಗಳಾಗಿ ಬೆಳೆಯಬೇಕು ಎಂದು ಹೇಳಿದರು.**

ಮುಖ್ಯ ಅತಿಥಿಯಾಗಿ ಭಾಗವಹಿಸಿದ ಸೈನಿಕ



ಅಶೋಕ ದೇಗಲಮಡಿ ಮಾತನಾಡಿ, ಕಾರ್ಯಕ್ರಮದಲ್ಲಿ ಕೃಷ್ಣ, ರಾಧೆ ಹಾಗೂ ಇತರ ಪಾತ್ರಗಳಲ್ಲಿ ಮಿಂಚಿದ ಪುಟಾಣಿಗಳ ಪ್ರತಿಭೆಯನ್ನು ಶ್ಲಾಘಿಸಿದರು. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ಸೃಜನಶೀಲತೆಯನ್ನು ಬೆಳೆಸಲು ಸಹಕಾರಿಯಾಗುತ್ತವೆ, ಮಕ್ಕಳು ಶಿಕ್ಷಣದ ಜೊತೆಗೆ ಸಂಸ್ಕಾರಗಳನ್ನು ಅಳವಡಿಸಿಕೊಂಡು ಭವಿಷ್ಯದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಿ ತಾಲೂಕು ಹಾಗೂ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಲಿ ಎಂದು ಹೇಳಿದರು. ಅತ್ಯುತ್ತಮವಾಗಿ ಶ್ರೀ ಕೃಷ್ಣ ರಾಧೆಯರ ವಸ್ತ್ರ ಹಾಗೂ ಮಾತನಾಡಿದ ಮಕ್ಕಳಿಗೆ ಪ್ರಥಮ,ದ್ವಿತೀಯ, ತೃತೀಯ ಹಾಗೂ ಉಳಿದ ಮಕ್ಕಳಿಗೆ ಸಮಾಧಾನಕರ ಬಹುಮಾನವನ್ನು ಕೊಡಲಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಶ್ರೀಕೃಷ್ಣನ ಬಾಲಲೀಲೆಗಳನ್ನು ಪ್ರತಿಬಿಂಬಿಸುವ ವಿವಿಧ ವೇಷಭೂಷಣಗಳಲ್ಲಿ ಪಾಲ್ಗೊಂಡು ಎಲ್ಲರ ಗಮನ ಸೆಳೆದರು. ಶಾಲೆಯ ಆಡಳಿತ ಅಧಿಕಾರಿ ರಾಜೇಂದ್ರ ಪ್ರಸಾದ, ಶಿಕ್ಷಕರಾದ ಸಿದ್ದಿಕ, ಸುಷ್ಮಾ, ಅಪರಂಜಿ, ರೋಹಿಣಿ, ಕವಿತಾ, ಪೋಷಕರು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಗೌರಿ-ಗಣೇಶ ಹಬ್ಬಕ್ಕೆ ಕೆಎಸ್‌ಆರ್‌ಟಿಸಿಯಿಂದ 2,400 ವಿಶೇಷ ಬಸ್ ವ್ಯವಸ್ಥೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿಯು ಪ್ರಯಾಣಿಕರ ಅನುಕೂಲಕ್ಕಾಗಿ 2,400 ಹೆಚ್ಚುವರಿ ವಿಶೇಷ ಬಸ್ ಸೇವೆಗಳನ್ನು ಕಲ್ಪಿಸಲಿದೆ.ಸೆ.14ರಂದು ಗೌರಿ-ಗಣೇಶ ಹಬ್ಬ ಹಾಗೂ ಸೆ.12 ಮತ್ತು 13ರಂದು ವಾರಾಂತ್ಯದ ದಿನಗಳಾಗಿರುವುದರಿಂದ ಪ್ರಯಾಣಿಕರ ಅನುಕೂಲಕ್ಕಾಗಿ ಸೆ.11ರಿಂದ 13ರವರೆಗೆ ಬೆಂಗಳೂರಿನಿಂದ ರಾಜ್ಯದ ಹಾಗೂ ಅಂತರರಾಜ್ಯದ ವಿವಿಧ ಸ್ಥಳಗಳಿಗೆ 2,400 ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಸೆ.14ರಂದು ಆಯಾ ಸ್ಥಳಗಳಿಂದ ಬೆಂಗಳೂರಿಗೆ ಮರಳಲು ವಿಶೇಷ ಬಸ್ ಸೇವೆಗಳನ್ನು ಒದಗಿಸಲಾಗುವುದು.**

ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ,




ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಸೇರಿದಂತೆ ವಿವಿಧ ಸ್ಥಳಗಳಿಗೆ ವಿಶೇಷ ಬಸ್ ಸೇವೆ ಇರಲಿದೆ. ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ ಹಾಗೂ ಮಡಿಕೇರಿ ಮಾರ್ಗಗಳಿಗೆ ವಿಶೇಷ ಬಸ್ ಸೇವೆ ಕಲ್ಪಿಸಲಾಗುವುದು.ತಮಿಳುನಾಡು ಮತ್ತು ಕೇರಳದ ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರು, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕೋಯಿಕ್ಕೋಡ್ ಸೇರಿದಂತೆ ವಿವಿಧ ಸ್ಥಳಗಳಿಗೆ ಶಾಂತಿನಗರದಲ್ಲಿರುವ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ವಿಶೇಷ ಬಸ್ ಸೇವೆ ಒದಗಿಸಲಾಗುವುದು.

ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡ ಆಸನ ಕಾಯ್ದಿರಿಸುವ ಸೌಲಭ್ಯ ಕಲ್ಪಿಸಲಾಗಿದೆ. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಕಾಯ್ದಿರಿಸಿದರೆ ಶೇ.5ರಷ್ಟು ರಿಯಾಯಿತಿ ನೀಡಲಾಗುವುದು. ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್‌ಗಳನ್ನು ಒಟ್ಟಿಗೆ ಕಾಯ್ದಿರಿಸಿದರೆ ವಾಪಸ್ ಪ್ರಯಾಣದ ದರದಲ್ಲಿ ಶೇ.10ರಷ್ಟು ರಿಯಾಯಿತಿ ದೊರೆಯಲಿದೆ. ಕರ್ನಾಟಕ ಸೇರಿದಂತೆ ನೆರೆಯ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೇರಿಯ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನ ಕಾಯ್ದಿರಿಸುವ ಕೌಂಟರ್‌ಗಳಿದ್ದು, ಅಲ್ಲಿಯೂ ನಿಗಮದ ಸಾರಿಗೆಗಳಿಗೆ ಮುಂಗಡವಾಗಿ ಆಸನ ಕಾಯ್ದಿರಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಕೆಎಸ್‌ಆರ್‌ಟಿಸಿ ಅಧಿಕೃತ ವೆಬ್‌ಸೈಟ್ ಸಂಪರ್ಕಿಸಬಹುದು.

## ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾಗಿ ಜಿ.ಟಿ.ದೇವೇಗೌಡ ಅವಿರೋಧ ಆಯ್ಕೆ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾಗಿ ಶಾಸಕ ಜಿ.ಟಿ. ದೇವೇಗೌಡ ಅವರು ಮರು ಆಯ್ಕೆಯಾಗಿದ್ದಾರೆ. ಇಂದು ನಡೆದ ಚುನಾವಣೆಯಲ್ಲಿ ಜಿ.ಟಿ. ದೇವೇಗೌಡ ಅವರು ಅಧ್ಯಕ್ಷರಾಗಿ ಹಾಗೂ ಬಿ.ಕೆ. ಶಿವಕುಮಾರ್ ಅವರು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಜಿ.ಟಿ. ದೇವೇಗೌಡ ಅವರು ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾಗಿ ಸತತ 7ನೇ ಬಾರಿಗೆ ಆಯ್ಕೆಯಾಗಿದ್ದಾರೆ. ಮುಂದಿನ ಐದು ವರ್ಷಗಳ ಅವಧಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್. ನವೀನ್ ತಿಳಿಸಿದ್ದಾರೆ.**

ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಗೆ ನಾಮಪತ್ರ ಸಲ್ಲಿಸುವ ಮುನ್ನ ಜಿ.ಟಿ. ದೇವೇಗೌಡ ಸೇರಿದಂತೆ ಮಹಾಮಂಡಳದ ಎಲ್ಲ ನಿರ್ದೇಶಕರು ಸದಾಶಿವನಗರದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಿವಾಸಕ್ಕೆ ತೆರಳಿ ಅವರನ್ನು ಭೇಟಿಯಾಗಿ ಅಭಿನಂದನೆ ಸಲ್ಲಿಸಿದ್ದರು. ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಸ್ತಕ್ಷೇಪ ಸಲ್ಲದು: ಜಿ.ಟಿ.ದೇವೇಗೌಡ ಬೆಂಗಳೂರು, ಸೆ.4- ಸಹಕಾರ ಕ್ಷೇತ್ರದಲ್ಲಿ ರಾಜಕೀಯ ಹಾಗೂ ಸರ್ಕಾರದ ಹಸ್ತಕ್ಷೇಪ ಇರಬಾರದು. ಸರ್ಕಾರ ಸಹಕಾರ ಕ್ಷೇತ್ರಕ್ಕೆ ಪ್ರೋತ್ಸಾಹ



ನೀಡಬೇಕೇ ಹೊರತು, ಅದರ ಸ್ವಾಯತ್ತತೆಗೆ ಧಕ್ಕೆ ತರುವ ರೀತಿಯಲ್ಲಿ ಹಸ್ತಕ್ಷೇಪ ಮಾಡಬಾರದು ಎಂದು ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಟಿ.ದೇವೇಗೌಡ ಹೇಳಿದರು.

ರಾಜ್ಯ ಸಹಕಾರ ಮಹಾಮಂಡಳದ ಅಧ್ಯಕ್ಷರಾಗಿ ಮರು ಆಯ್ಕೆಯಾದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜಕೀಯ ಹಸ್ತಕ್ಷೇಪದಿಂದ ಸಹಕಾರ ಕ್ಷೇತ್ರದ ಬೆಳವಣಿಗೆ ಕುಂಠಿತವಾಗುತ್ತದೆ. ಸಹಕಾರ ಸಂಘ-ಸಂಸ್ಥೆಗಳು ಸ್ವತಂತ್ರವಾಗಿ ಹಾಗೂ ಸ್ವಾಯತ್ತತೆಯಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಅವು ಆರ್ಥಿಕವಾಗಿ ಬಲಿಷ್ಠವಾಗಲು ಸಾಧ್ಯ ಎಂದರು. ರೈತರ ಕೃಷಿ ಸಾಲ ಮನ್ನಾ ಸೇರಿದಂತೆ ಕೆಲ ಸಂದರ್ಭಗಳಲ್ಲಿ ಸರ್ಕಾರ ನೆರವು ನೀಡಿದೆ. ಅದನ್ನು ಹೊರತುಪಡಿಸಿದರೆ ಸಹಕಾರ ಕ್ಷೇತ್ರಕ್ಕೆ ಸರ್ಕಾರದಿಂದ ಹೆಚ್ಚಿನ ಆರ್ಥಿಕ ನೆರವು ದೊರೆಯುತ್ತಿಲ್ಲ. ಸದಸ್ಯರ ಷೇರು ಹಣದಿಂದಲೇ ಬಹುತೇಕ ಸಹಕಾರ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಆದ್ದರಿಂದ ಸಹಕಾರ ಸಂಘ-ಸಂಸ್ಥೆಗಳಿಗೆ ಸ್ವಾಯತ್ತತೆ ನೀಡುವುದು ಅಗತ್ಯ ಎಂದು ಹೇಳಿದರು.

ಸಹಕಾರಿ ಬ್ಯಾಂಕ್‌ಗಳಲ್ಲಿ ಹಣಕಾಸಿನ ದುರುಪಯೋಗ ನಡೆದರೆ ಅಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಸಹಕಾರ ಸಂಘಗಳು ಜಿಲ್ಲಾ ಯೂನಿಯನ್‌ನಲ್ಲಿ ಕಡ್ಡಾಯವಾಗಿ ಸದಸ್ಯತ್ವ ಪಡೆಯಬೇಕು ಎಂದು ಅವರು ಒತ್ತಾಯಿಸಿದರು. ಎಲ್ಲ ಕ್ಷೇತ್ರಗಳಲ್ಲೂ ಸಹಕಾರ ಸಂಸ್ಥೆಗಳ ಪಾತ್ರ ಸಹಕಾರ ಕ್ಷೇತ್ರವು ಬಹುತೇಕ ಎಲ್ಲ ರಂಗಗಳಲ್ಲೂ ತನ್ನದೇ ಆದ ಪಾತ್ರ ಹೊಂದಿದೆ. ಗೃಹಸಾಲ, ಶಿಕ್ಷಣ ಸಾಲ, ನಿವೇಶನ ಹಂಚಿಕೆ ಸೇರಿದಂತೆ ಹಲವು ಕಾರ್ಯಗಳನ್ನು ಸಹಕಾರ ಸಂಸ್ಥೆಗಳು ನಿರ್ವಹಿಸುತ್ತಿವೆ. ರಾಜ್ಯ ಸಹಕಾರ ಮಹಾಮಂಡಳವು ಸಹಕಾರ ಕ್ಷೇತ್ರದ ಪ್ರಚಾರ, ಶಿಕ್ಷಣ ಮತ್ತು ತರಬೇತಿಗೆ ಒತ್ತು ನೀಡುತ್ತಿದೆ. ರಾಜ್ಯದ ಎಂಟು ತರಬೇತಿ ಕೇಂದ್ರಗಳ ಮೂಲಕ ಈವರೆಗೆ ಸುಮಾರು 70 ಸಾವಿರ ಮಂದಿಗೆ ತರಬೇತಿ ನೀಡಲಾಗಿದೆ ಎಂದು ತಿಳಿಸಿದರು.ಸಹಕಾರ ವಿಷಯದಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ಪಡೆದವರಿಗೆ ನೇಮಕಾತಿಯಲ್ಲಿ ಆದ್ಯತೆ ನೀಡಬೇಕು ಎಂಬ ಬೇಡಿಕೆ ಇದೆ. ಈ ಬೇಡಿಕೆಯನ್ನು ಈಡೇರಿಸುವ ಭರವಸೆಯನ್ನು ಮುಖ್ಯಮಂತ್ರಿ ನೀಡಿದ್ದಾರೆ ಎಂದು ಜಿ.ಟಿ.ದೇವೇಗೌಡ ಹೇಳಿದರು.

ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ 1995ರಲ್ಲಿ ಆರಂಭಿಸಿದ ಸಹಕಾರ ಸಪ್ತಾಹ ಕಾರ್ಯಕ್ರಮ ನಿರಂತರವಾಗಿ ನಡೆಯುತ್ತಿದೆ. ಮಹಾಮಂಡಳದ ವತಿಯಿಂದ ನೆಲಮಂಗಲದ ಬಳಿ ಖರೀದಿಸಲಾಗಿದ್ದ ಜಮೀನಿಗೆ ಕಾಂಪೌಂಡ್ ನಿರ್ಮಿಸಿ ಸ್ವಾಧೀನದಲ್ಲಿಟ್ಟುಕೊಂಡಿದ್ದರೂ, ಭೂ ಪರಿವರ್ತನೆಯಾದ ಆಸ್ತಿಯ ಆರ್‌ಟಿಸಿಯಲ್ಲಿ ಮಹಾಮಂಡಳದ ಹೆಸರು ನಮೂದಾಗಿಲ್ಲ. ಇದರಿಂದ ಸಮಸ್ಯೆ ಎದುರಾಗಿದೆ ಎಂದು ಅವರು ಹೇಳಿದರು. ಅವಿರೋಧ ಆಯ್ಕೆ ಮಹಾಮಂಡಳದ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಅವಿರೋಧವಾಗಿ ಆಯ್ಕೆಯಾಗಲು ಸಹಕಾರ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸಹಕಾರ ಸಚಿವ ಲಕ್ಷ್ಮಣ ಸವದಿ ಅವರು ನೀಡಿದ ಮಾರ್ಗದರ್ಶನ ಸಹಕಾರಿಯಾಗಿದೆ ಎಂದು ಜಿ.ಟಿ.ದೇವೇಗೌಡ ತಿಳಿಸಿದರು.ಮಾಜಿ ಸಚಿವ ಎಚ್.ಕೆ.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪದಾಧಿಕಾರಿಗಳ ಚುನಾವಣೆಯಲ್ಲಿ ತಾವು ಮತ್ತೊಮ್ಮೆ ಅಧ್ಯಕ್ಷರಾಗಿ ಹಾಗೂ ಬಿ.ಕೆ.ಶಿವಕುಮಾರ್ ಅವರು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಹೇಳಿದರು.

## ಬೆಂಗಳೂರಿನ ಪ್ರಮುಖ ಮೇಲ್ಸೇತುವೆಗಳ ಮೇಲೆ ವಾಹನ ಸಂಚಾರ ನಿರ್ಬಂಧ

ವಿಜಯ ದುಂಬಿ ಸುದ್ದಿ....

**ಬೆಂಗಳೂರು: ನಗರದಲ್ಲಿ ಸುಗಮ ಸಂಚಾರ ಹಾಗೂ ಸಾರ್ವಜನಿಕರ ಸುರಕ್ಷತೆ ಖಾತರಿಪಡಿಸುವ ನಿಟ್ಟಿನಲ್ಲಿ ಬೆಂಗಳೂರು ಸಂಚಾರ ಪೊಲೀಸರು ಪ್ರಮುಖ ಮೇಲ್ಸೇತುವೆಗಳು ಮತ್ತು ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ಹೊಸ ಸಂಚಾರ ನಿರ್ಬಂಧಗಳನ್ನು ಇಂದಿನಿಂದ ಜಾರಿಗೊಳಿಸಿದ್ದಾರೆ. ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಮೇಲ್ಸೇತುವೆಗಳಲ್ಲಿ ಅತಿಭಾರದ ವಾಹನಗಳ ಸಂಚಾರದಿಂದ ಉಂಟಾಗುತ್ತಿರುವ ಸಮಸ್ಯೆಗಳನ್ನು ಪರಿಗಣಿಸಿ ಈ ಕ್ರಮ ಕೈಗೊಳ್ಳಲಾಗಿದೆ. ಮೇಲ್ಸೇತುವೆಗಳು ಸಂಚಾರ ದಟ್ಟಣೆ ತಗ್ಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದರೂ, ಕೆಲವು ನಿರ್ದಿಷ್ಟ ವರ್ಗದ ವಾಹನಗಳ ಸಂಚಾರದಿಂದ ಟ್ರಾಫಿಕ್ ಜಾಮ್ ಹಾಗೂ ಸುರಕ್ಷತಾ ಸಮಸ್ಯೆಗಳು ಎದುರಾಗುತ್ತಿದ್ದವು.**

ಈ ಹಿನ್ನೆಲೆಯಲ್ಲಿ ಬಿಜಿಎಸ್ ಫ್ಲೈಓವರ್, ಪೀಣ್ಯ ಎಲಿವೇಟೆಡ್ ಕಾರಿಡಾರ್, ಸಿಲ್ಕ್ ಬೋರ್ಡ್-ರಾಗಿಗುಡ್ಡ ಡಬಲ್ ಡೆಕ್ಕರ್ ಫ್ಲೈಓವರ್ ಹಾಗೂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆ ಎಲಿವೇಟೆಡ್ ಕಾರಿಡಾರ್‌ನಲ್ಲಿ ವಾಹನ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಅಪಘಾತಗಳ ಪ್ರಮಾಣ, ವಿವಿಧ ವಾಹನಗಳ ವೇಗದಲ್ಲಿನ ವ್ಯತ್ಯಾಸ, ವಾಹನಗಳು ಕೆಟ್ಟು ನಿಲ್ಲುವುದರಿಂದ ಉಂಟಾಗುವ ದಟ್ಟಣೆ, ಮೇಲ್ಸೇತುವೆಗಳ ಪ್ರವೇಶ-ನಿರ್ಗಮನ ಭಾಗಗಳಲ್ಲಿನ ಸಮಸ್ಯೆಗಳು ಹಾಗೂ ತುರ್ತು ಸಂದರ್ಭಗಳಲ್ಲಿ ಸಂಚಾರ




ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಿದ ಬಳಿಕ ಈ ನಿರ್ಧಾರ ಕೈಗೊಳ್ಳಲಾಗಿದೆ. ಬೆಂಗಳೂರು ಸಂಚಾರ ವಿಭಾಗದ ಪ್ರಕಟಣೆಯಂತೆ, ಈ ಎಲ್ಲ ಮಾರ್ಗಗಳಲ್ಲಿ ಇಂದಿನಿಂದ ನಿರ್ಬಂಧ ಜಾರಿಗೆ ಬಂದಿದ್ದು, ಸಿಸಿಟಿವಿ ಮೂಲಕ ಕಣ್ಗಾವಲು ಇರಿಸಲಾಗುತ್ತದೆ.

ಸಾರ್ವಜನಿಕರು ನಿಯಮಗಳನ್ನು ಪಾಲಿಸಿ ಪೊಲೀಸರೊಂದಿಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ. ಯಾವ ಮಾರ್ಗದಲ್ಲಿ ಯಾವ ವಾಹನಕ್ಕೆ ನಿರ್ಬಂಧ? ಬಿಜಿಎಸ್ ಫ್ಲೈಓವರ್- ಮೈಸೂರು ರಸ್ತೆ ಭಾರೀ ಸರಕು ಸಾಗಣೆ ವಾಹನಗಳಿಗೆ 24 ಗಂಟೆಯೂ ಪ್ರವೇಶವಿಲ್ಲ. ಇತರೆ ಸರಕು ಸಾಗಣೆ ವಾಹನಗಳು ಹಾಗೂ ಮೂರು ಚಕ್ರದ ಗೂಡ್ಸ್ ಆಟೋಗಳಿಗೆ ಬೆಳಗ್ಗೆ 7ರಿಂದ 11ರವರೆಗೆ ಮತ್ತು ಸಂಜೆ 4ರಿಂದ ರಾತ್ರಿ 10ರವರೆಗೆ ನಿರ್ಬಂಧ. ಪೀಣ್ಯ ಎಲಿವೇಟೆಡ್ ಕಾರಿಡಾರ್ ಪ್ರಯಾಣಿಕರ ಆಟೋರಿಕ್ಷಾ ಹಾಗೂ ಮೂರು ಚಕ್ರದ ಗೂಡ್ಸ್ ಆಟೋಗಳಿಗೆ 24 ಗಂಟೆಯೂ ನಿರ್ಬಂಧ. ಭಾರೀ ಮತ್ತು ಮಧ್ಯಮ ಸರಕು ಸಾಗಣೆ ವಾಹನಗಳಿಗೆ ಬೆಳಗ್ಗೆ 7ರಿಂದ 11ರವರೆಗೆ ಹಾಗೂ ಸಂಜೆ 4ರಿಂದ ರಾತ್ರಿ 10ರವರೆಗೆ ಸಂಚಾರ ನಿರ್ಬಂಧ.

ಸಿಲ್ಕ್ ಬೋರ್ಡ್-ರಾಗಿಗುಡ್ಡ ಡಬಲ್ ಡೆಕ್ಕರ್ ಫ್ಲೈಓವರ್ ಭಾರೀ ಸರಕು ಸಾಗಣೆ ವಾಹನಗಳ ಸಂಚಾರಕ್ಕೆ 24 ಗಂಟೆಯೂ ನಿರ್ಬಂಧ. ಈ ಕಾರಿಡಾರ್‌ನಲ್ಲೂ ವಾಹನ ಅಪಘಾತಗಳು ಹಾಗೂ ವಾಹನಗಳು ಕೆಟ್ಟು ನಿಲ್ಲುವ ಘಟನೆಗಳು ಸಂಚಾರಕ್ಕೆ ಅಡ್ಡಿಯಾಗುತ್ತಿರುವುದು ಕಂಡುಬಂದಿದೆ. ಮೇ 2026ರಲ್ಲಿ ರಾಗಿಗುಡ್ಡ ಕಡೆಗೆ ಸಾಗುತ್ತಿದ್ದ ಕಾರೊಂದು ಗೋಡೆಗೆ ಡಿಕ್ಕಿಯಾದ ಘಟನೆಯೂ ವರದಿಯಾಗಿತ್ತು. ಸಂಜೀವನಗರ ಕ್ರಾಸ್‌ನಿಂದ ವಿದ್ಯಾಶಿಲ್ಪ ಜಂಕ್ಷನ್‌ವರೆಗಿನ ಈ ಮಾರ್ಗದಲ್ಲಿ: ದ್ವಿಚಕ್ರ ವಾಹನ ಹಾಗೂ ಆಟೋರಿಕ್ಷಾಗಳಿಗೆ 24 ಗಂಟೆಯೂ ನಿರ್ಬಂಧ. ಎಲ್ಲ ವರ್ಗದ ಸರಕು ಸಾಗಣೆ ವಾಹನಗಳಿಗೆ ಬೆಳಗ್ಗೆ 6ರಿಂದ ರಾತ್ರಿ 10ರವರೆಗೆ ನಿರ್ಬಂಧ. ಅಪಘಾತಗಳ ಹಿನ್ನೆಲೆ ಮೇಲ್ಸೇತುವೆಗಳಲ್ಲಿ ವೇಗವಾಗಿ ಸಂಚರಿಸುವ ಕಾರುಗಳು, ಭಾರೀ ವಾಹನಗಳು, ದ್ವಿಚಕ್ರ ವಾಹನಗಳು ಹಾಗೂ ಆಟೋರಿಕ್ಷಾಗಳು ಒಂದೇ ಮಾರ್ಗವನ್ನು ಬಳಸಿದಾಗ ವಾಹನಗಳ ವೇಗದಲ್ಲಿ ಹೆಚ್ಚಿನ ವ್ಯತ್ಯಾಸ ಉಂಟಾಗುತ್ತದೆ. ಇದರಿಂದ ಅಪಘಾತ ಸಂಭವಿಸಿದ ಸಂದರ್ಭದಲ್ಲಿ ಅದರ ತೀವ್ರತೆ ಹೆಚ್ಚುವ ಸಾಧ್ಯತೆಯೂ ಇರುತ್ತದೆ.

ಇದೇ ಹಿನ್ನೆಲೆಯಲ್ಲಿ ಸಂಚಾರ ಪೊಲೀಸರು ರಸ್ತೆ ವಿನ್ಯಾಸ, ಮೇಲ್ಸೇತುವೆಯ ಅಗಲ, ಅಪಘಾತಗಳ ಪ್ರಮಾಣ ಮತ್ತು ತೀವ್ರತೆ, ವಾಹನಗಳು ಕೆಟ್ಟು ನಿಲ್ಲುವುದರಿಂದ ಉಂಟಾಗುವ ದಟ್ಟಣೆ ಹಾಗೂ ಪ್ರವೇಶ-ನಿರ್ಗಮನ ಭಾಗಗಳಲ್ಲಿನ ಸಮಸ್ಯೆಗಳನ್ನು ಪರಿಶೀಲಿಸಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ನಗರದ ವಿವಿಧ ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ಸಣ್ಣ ಹಾಗೂ ಭಾರೀ ವಾಹನಗಳ ನಡುವಿನ ವೇಗದ ವ್ಯತ್ಯಾಸ, ರಸ್ತೆ ಬದಿಯಲ್ಲಿ ವಾಹನಗಳು ಕೆಟ್ಟು ನಿಲ್ಲುವುದು ಹಾಗೂ ಅಪಘಾತದ ಬಳಿಕ ತ್ವರಿತವಾಗಿ ವಾಹನ ತೆರವುಗೊಳಿಸಲು ಎದುರಾಗುವ ತೊಂದರೆಗಳು ಪ್ರಮುಖ ಸವಾಲಾಗಿ ಪರಿಣಮಿಸಿವೆ.

ಡಬಲ್ ಡೆಕ್ಕರ್‌ನಲ್ಲೂ ಹೊಸ ಸವಾಲು ಸಿಲ್ಕ್ ಬೋರ್ಡ್-ರಾಗಿಗುಡ್ಡ ಡಬಲ್ ಡೆಕ್ಕರ್ ಫ್ಲೈಓವರ್ ಇತ್ತೀಚೆಗಷ್ಟೇ ಸಂಪೂರ್ಣವಾಗಿ ಸಂಚಾರಕ್ಕೆ ಮುಕ್ತವಾಗಿದ್ದು, ಸಿಲ್ಕ್ ಬೋರ್ಡ್ ಜಂಕ್ಷನ್‌ನ ಸಂಚಾರ ದಟ್ಟಣೆ ಕಡಿಮೆಯಾಗುವ ನಿರೀಕ್ಷೆ ಮೂಡಿಸಿತ್ತು. ಏಪ್ರಿಲ್ 2026ರಲ್ಲಿ ಎರಡೂ ದಿಕ್ಕಿನಲ್ಲಿ ಸಂಚಾರ ಆರಂಭವಾದ ಬಳಿಕ ಸಿಲ್ಕ್ ಬೋರ್ಡ್ ಜಂಕ್ಷನ್‌ನ ದಟ್ಟಣೆಯಲ್ಲಿ ಸ್ವಲ್ಪ ಮಟ್ಟಿನ ಪರಿಹಾರ ಕಂಡುಬಂದಿದ್ದರೂ, ಫ್ಲೈಓವರ್‌ನ ನಿರ್ಗಮನ ಭಾಗಗಳಲ್ಲಿ ಹೊಸದಾಗಿ ವಾಹನ ದಟ್ಟಣೆ ಉಂಟಾಗುತ್ತಿರುವ ಬಗ್ಗೆ ವರದಿಗಳು ಬಂದಿವೆ. ಹೀಗಾಗಿ ಪ್ರಮುಖ ಮೇಲ್ಸೇತುವೆಗಳಲ್ಲಿ ನಿರ್ದಿಷ್ಟ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸುವ ಮೂಲಕ ಅಪಘಾತದ ಅಪಾಯ ಕಡಿಮೆ ಮಾಡುವುದು ಹಾಗೂ ಸುಗಮ ಸಂಚಾರಕ್ಕೆ ಆದ್ಯತೆ ನೀಡುವುದು ಸಂಚಾರ ಪೊಲೀಸರ ಉದ್ದೇಶವಾಗಿದೆ.

# 309ನೇ ದಿನದಲ್ಲಿ ಮುನ್ನಡೆದ ಬಲ್ಡೋಟ ಹಾಗೂ ಮಾಲಿನ್ಯ ವಿರೋಧಿ ಧರಣಿ

**ವಿಜಯ ದುಂಬಿ ಸುದ್ದಿ....**

**ಕೊಪ್ಪಳ: ಈಗಾಗಲೇ ಗಿಣಿಗೇರಿ, ಹಿರೇಬಗನಾಳ ಸುತ್ತ ಮಾಲಿನ್ಯಕಾರಿ 28 ಬೃಹತ್ (ಸಣ್ಣ ದೊಡ್ಡ ಸೇರಿ 202) ಕಾರ್ಖಾನೆಗಳು ಒಂದೇ ಕಡೆ ಕೇಂದ್ರಿಕರಣ ಆಗಿದ್ದದಿಂದ ಇಲ್ಲಿನ ಪರಿಸರ ಧಾರಣ ಸಾಮರ್ಥ್ಯ ಸಂಪೂರ್ಣ ಕಳೆದುಕೊಂಡಿದ್ದರೂ ಮತ್ತೇ ಅಲ್ಲಿಯೇ ಕಾರ್ಖಾನೆ ವಿಸ್ತರಣೆ ಮಾಡಲು ಮುಂದಾದ ಕ್ರಮವನ್ನು ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಖಂಡಿಸಿದರು.**

ನಗರಸಭೆ ಆವರಣದಲ್ಲಿ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಜಂಟಿಯಾಗಿ ನಡೆಸುತ್ತಿರುವ ಬಲ್ಡೋಟ ಹಾಗೂ ಮಾಲಿನ್ಯ ವಿರೋಧಿ ಧರಣಿ 309ನೇ ದಿನದಲ್ಲಿ ಮುನ್ನಡೆದ ಧರಣಿಯಲ್ಲಿ ಮಾತನಾಡಿದ ಬೆಟ್ಟದೂರು ಅವರು 'ಒಂದೂವರೆ ವರ್ಷದ ಹಿಂದೆ ಬಲ್ಡೋಟ ಬೃಹತ್ ಸ್ಥಾಪನೆಯನ್ನು ಮಾಡಬಾರದು, ಈಗಿರುವ ಕಾರ್ಖಾನೆಗಳು




ಮಾಲಿನ್ಯ ನಿಯಂತ್ರಣ ಮಾಡಿ, ಸರಕಾರದಿಂದ ಗ್ರಾಮಗಳ ಜನರನ್ನು ಜೋಪಾನ ಮಾಡಬೇಕು ಎಂದು ಜನಪ್ರತಿನಿಧಿಗಳಿಗೆ ಜನರ ಪರವಾಗಿ ಆದೇಶ ಮಾಡಿದ್ದರು. ಬಲ್ಡೋಟ ಬೃಹತ್ ಸ್ಥಾಪನೆ ತಡೆದ ಆದೇಶವನ್ನು ತರಲು ಜನಪ್ರತಿನಿಧಿಗಳಿಗೆ ಹೇಳಿದ್ದರು.

ಅದಲ್ಲದೆ ನಾಯಿ ರೀತಿ ವಾಂತಿ ಮಾಡಿಕೊಳ್ಳುವ ಕಾರ್ಖಾನೆಗಳು ನಮಗೇಕೆ? ಐಟಿ, ಬಿಟಿ, ಥೀಮ್ ಪಾರ್ಕ್, ನಾಲೇಜ್ ಪಾರ್ಕ್ ಬೆಂಗಳೂರಿಗೆ ಏಕೆ ಎಂದು ಗಂಭೀರವಾದ ಪ್ರಶ್ನೆ ಎತ್ತಿದ್ದರು. ಗವಿಸಿದ್ದೇಶ್ವರ ಸ್ವಾಮೀಜಿ ಹೇಳಿದಂತೆ ಇದುವರೆಗೆ ಬಲ್ಡೋಟ ತಡೆ ಆದೇಶ ತಂದಿಲ್ಲ. ಇಲ್ಲಿ ಯಾವ ಕಾರ್ಖಾನೆಗಳ ಮಾಲಿನ್ಯ ನಿಯಂತ್ರಣ-ಕ್ಕೆ ಬಂದಿಲ್ಲ. ಕೇವಲ ಪಿಬಿಎಸ್ ಎನ್ನುವ ಒಂದು ಕಾರ್ಖಾನೆ ಮುಚ್ಚಿದ್ದು, 9 ಕಾರ್ಖಾನೆಗಳಿಗೆ ಎನ್.ಪಿ.ಡಿ ನೋಟೀಸ್ ಜಾರಿ ಮಾಡಿದ್ದು ಬಿಟ್ಟರೆ ಬೇರಾವ ಗಂಭೀರವಾದ ಕಾನೂನು ಕ್ರಮಗಳು ಜರುಗಿಲ್ಲ. ಪರಿಸ್ಥಿತಿ ಇಷ್ಟೊಂದು ಹದಗೆಟ್ಟು ನವಜಾತ ಶಿಶು ಆದಿಯಾಗಿ, ಈ ಕಾರ್ಖಾನೆಗಳ ಮಾಲಿನ್ಯದಿಂದ ಜನರು ರೋಗಗ್ರಸ್ತರಾಗಿ ಜೀವ ಕಳೆದುಕೊಳ್ಳುತ್ತಿದ್ದಾಗಲೂ ಗಿಣಿಗೇರಿ, ಅಲ್ಲಾನಗರ ಪಕ್ಕದ ಕನಕಾಪುರ ಗ್ರಾಮದಲ್ಲಿ ಮುಕುಂದ ಸುಮಿ ಎನ್ನುವ ಮಾಲಿನ್ಯಕಾರಿ ಸ್ಟೀಲ್ ಕಂಪನಿ ವಿಸ್ತರಣೆ ಬಯಸಿ ಇದೇ ತಿಂಗಳ 29ರಂದು ಸಾರ್ವಜನಿಕ ಆಲಿಕೆಯನ್ನು ಕೋರಿರುವ ಕ್ರಮವನ್ನು ವೇದಿಕೆ ತೀವ್ರವಾಗಿ ವಿರೋಧಿಸಿದೆ.

ಈ ಸಾರ್ವಜನಿಕ ಆಲಿಕೆಯನ್ನು ಮುಕುಂದ ಸುಮಿ ಘಟಕದ ಆವರಣದಲ್ಲಿ ಜಿಲ್ಲಾಧಿಕಾರಿಗಳು ನಡೆಸುವುದನ್ನು ಕೈಬಿಡಬೇಕು. ಇದು ಕೇವಲ ಕನಕಾಪುರದ ಸಮಸ್ಯೆಯಲ್ಲ. ಈಗಾಗಲೇ ಕೊಪ್ಪಳ-ಭಾಗ್ಯನಗರವರೆಗೆ ಈ ಕಾರ್ಖಾನೆಗಳ ಮಾಲಿನ್ಯ ಹರಡುತ್ತಿದೆ. ಮತ್ತೆ ಇದರ ವಿಸ್ತರಣೆಗೆ ಅನುಮತಿ ಕೊಟ್ಟರೆ ಕೊಪ್ಪಳ ಸಂಪೂರ್ಣ ಧೂಳು, ಹಾರುಬೂದಿ ಬಾಧಿತವಾಗಿ ಜನರ ಆರೋಗ್ಯ ಮೇಲೆ ದುಃಷ್ಪ-ರಿಣಾಮವಾಗುತ್ತದೆ. ಈ ವಿಸ್ತರಣೆ ಕಡ್ಡಾಯವಾಗಿ ನಿಲ್ಲಿಸಬೇಕು. ಅವೈಜ್ಞಾನಿಕವಾದ ಯೋಜನೆ ತಂದು ಪರಿಸರ ಹಾಳು ಮಾಡುವ ಸಾರ್ವಜನಿಕ ಆಲಿಕೆಯನ್ನು ವಿರೋಧಿಸೋಣ. ದಿ: 29.09.2026 ಮಂಗಳವಾರ ಸಾರ್ವಜನಿಕ ಆಲಿಕೆಯನ್ನು ಸುತ್ತಲಿನ ಗ್ರಾಮಸ್ಥರು ತಡೆಯಬೆಕು ಎಂದರು. ಧರಣಿಯಲ್ಲಿ ಪ್ರಕಾಶಕ ಡಿ.ಎಂ.ಬಡಿಗೇರ, ಸಂಚಾಲಕ ಮಲ್ಲಿಕಾರ್ಜುನ ಬಿ.ಗೋನಾಳ, ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಭೀಮಸೇನ ಕಲಕೇರಿ, ವೀರಪ್ಪ ವಾಲಿ, ಸುಭಾನಸಾಬ್ ನೀರಲಗಿ, ಮೂಕಪ್ಪ ಮೇಸ್ತ್ರಿ ಬಸಾಪುರ, ವೆಂಕಣ್ಣಾಚಾರ ಕಟ್ಟಿ, ಯಲ್ಲಪ್ಪ ಸಿದ್ದರ್, ಬಸಪ್ಪ ಕಲಕೇರಿ, ಗಂಗಪ್ಪ ಡಂಬಳ, ಶಿವಪ್ಪ ಬನಪ್ಪನವರ, ಪಂಪಣ್ಣ ಚಿಂತಪಲ್ಲಿ, ಮುರಡಪ್ಪ ಗುಂಡೂರ, ಗವಿಸಿದ್ದಪ್ಪ ಹಲಿಗಿ, ಜಯಶ್ರೀ ಮುಂತಾದವರು ಇದ್ದರು.

## ರಾಷ್ಟ್ರ ರಾಜಧಾನಿಯಲ್ಲಿ ಭಾರಿ ಮಳೆ, ರೆಡ್ ಅಲರ್ಟ್ ಎಚ್ಚರಿಕೆ ನೀಡಿದ IMD

**ವಿಜಯ ದುಂಬಿ ಸುದ್ದಿ....**

**ದೆಹಲಿ: ಶುಕ್ರವಾರ ದೆಹಲಿಯ ಹಲವು ಭಾಗಗಳಲ್ಲಿ ಭಾರಿ ಮಳೆಯಾಗುತ್ತಿದೆ. ತೀವ್ರ ಮಳೆ, ಗುಡುಗು-ಸಿಡಿಲು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿರುವುದರಿಂದ ಭಾರತೀಯ ಹವಾಮಾನ ಇಲಾಖೆ (IMD) 'ರೆಡ್ ಅಲರ್ಟ್' ಘೋಷಿಸಿತ್ತು. ಈ ಅನಿರೀಕ್ಷಿತ ಮಳೆಯು ರಾಜಧಾನಿಯಾದ್ಯಂತ ನಡೆಯುತ್ತಿದ್ದ ಜನ್ಮಾಷ್ಟಮಿ ಆಚರಣೆಗಳಿಗೆ ಅಡ್ಡಿಪಡಿಸಿದ್ದು, ಮಳೆಯಿಂದಾಗಿ ರಸ್ತೆಗಳು ನೆನೆದಿದ್ದವು, ಬೀದಿಗಳಲ್ಲಿ ಛತ್ರಿಗಳು ಕಾಣಿಸಿಕೊಂಡವು ಮತ್ತು ಮಳೆ ತೀವ್ರಗೊಂಡಂತೆ ಜನರು ಆಶ್ರಯಕ್ಕಾಗಿ ಧಾವಿಸುವುದು ಕಂಡುಬಂದಿತು.**



ಇಲಾಖೆಯ ಪ್ರತಿ ಮೂರು ಗಂಟೆಗಳ ಮಳೆಯ ದತ್ತಾಂಶದ ಪ್ರಕಾರ, ಬೆಳಗ್ಗೆ 11.30 ರಿಂದ ಮಧ್ಯಾಹ್ನ 2.30 ರ ನಡುವೆ ಪಾಲಮ್‌ನಲ್ಲಿ 3.4 ಮಿ.ಮೀ ಮಳೆಯಾದರೆ, ನಜಫ್‌ಗಢದಲ್ಲಿ ಬೆಳಗ್ಗೆ 8.30 ರಿಂದ 11.30 ರ ನಡುವೆ 0.5 ಮಿ.ಮೀ ಮಳೆಯಾಗಿದೆ. ಇದೇ ಅವಧಿಯಲ್ಲಿ ಇತರ ಹೆಚ್ಚಿನ ಮಾನಿಟರಿಂಗ್ ಕೇಂದ್ರಗಳಲ್ಲಿ ಯಾವುದೇ ಮಳೆ ದಾಖಲಾಗಿಲ್ಲ. ಮಧ್ಯಾಹ್ನ 2.15 ಕ್ಕೆ ನೀಡಲಾದ ಅಲ್ಪಾವಧಿಯ ಹವಾಮಾನ ಮುನ್ಸೂಚನೆಯಲ್ಲಿ, ಮಧ್ಯಾಹ್ನ 2.15 ರಿಂದ 4.15 ರ ನಡುವೆ ಅನೇಕ ಕಡೆಗಳಲ್ಲಿ ಗುಡುಗು-ಸಿಡಿಲು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಮತ್ತು ಕೆಲವು ನಿರ್ದಿಷ್ಟ ಪ್ರದೇಶಗಳಲ್ಲಿ ಭಾರಿ ಮಳೆಯಾಗಬಹುದು ಎಂದು ಇಲಾಖೆ ತಿಳಿಸಿದೆ. ಸಂಜೆ 5 ರಿಂದ ರಾತ್ರಿ 8 ರ ನಡುವೆ ನಗರದ ಬಹುತೇಕ ಭಾಗಗಳಲ್ಲಿ ಗುಡುಗು-ಸಿಡಿಲು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಮತ್ತು ಕೆಲವು ನಿರ್ದಿಷ್ಟ ಸ್ಥಳಗಳಲ್ಲಿ ಭಾರಿ ಮಳೆಯಾಗಬಹುದು ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ಯುವಕರು ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕು: ನರಸಪ್ಪ ಯಾದವ್

**ವಿಜಯ ದುಂಬಿ ಸುದ್ದಿ....**

**ರಾಯಚೂರು: ಸಮಾಜದ ಅಭಿವೃದ್ಧಿ ಕೇವಲ ಮಾತುಗಳಿಂದ ಸಾಧ್ಯವಿಲ್ಲ. ಯುವ ಜನರು ಶಿಕ್ಷಣ, ಕೌಶಲ್ಯ ಹಾಗೂ ಸ್ವಾವಲಂಬನೆಯನ್ನು ರೂಢಿಸಿಕೊಂಡು ಉದ್ಯೋಗ ಹುಡುಕುವ ಬದಲು ಇತರರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕೆಂದು ಉಪನ್ಯಾಸಕ ನರಸಪ್ಪ ಯಾದವ್ ಅವರು ಹೇಳಿದರು.**

ಸೆಪ್ಟಂಬರ್ 04ರ ಶುಕ್ರವಾರ ದಂದು ನಗರದ ಯಾದವ್ ಸಂಘದ ಕಲ್ಯಾಣ ಮಂಟಪದಲ್ಲಿ ರಾಯಚೂ-ರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.



ಶಿಕ್ಷಣ, ಸಂಘಟನೆ, ಹೋರಾಟ ಮತ್ತು ಅರಿವು ಎಂಬ ಪಂಚಸೂತ್ರಗಳ ಆಧಾರದ ಮೇಲೆ ಜಿಲ್ಲಾ ಯಾದವ ಸಂಘ ಮುನ್ನಡೆಯುತ್ತಿದೆ. ಹಳ್ಳಿಗಳಲ್ಲಿ ಬಡ ತಾಯಂದಿರು ನೀಡಿದ 11 ರೂಪಾಯಿ ಪ್ರೀತಿಯ ಕೊಡುಗೆಯಿಂದ ಹಿಡಿದು ಲಕ್ಷಾಂತರ ರೂಪಾಯಿ ದೇಣಿಗೆ ನೀಡಿದ ಪ್ರತಿಯೊಬ್ಬರ ಶ್ರಮವೂ ಸಂಘದ ಬೆಳವಣಿಗೆಗೆ ಸಮಾನ ಕಾರಣ 'ಧರ್ಮೋ ರಕ್ಷತಿ ರಕ್ಷಿತಃ' ಎಂಬ ತತ್ತ್ವದೊಂದಿಗೆ ಸಂಘವು ಪ್ರತಿಯೊಬ್ಬರ ಆತ್ಮಗೌರವವನ್ನು ಎತ್ತಿಹಿಡಿಯಲಿದೆ ಎಂದರು.

ಪೊಲೀಸ್, ಗ್ರಾಮ ಆಡಳಿತಾಧಿಕಾರಿ, ಪಿಡಿಒ ಹಾಗೂ ಸಿಇಟಿ ಪರೀಕ್ಷೆಗಳಿಗೆ ಸಮಾಜದ ಯುವಕರಿಗೆ 1 ತಿಂಗಳ ಉಚಿತ ತರಬೇತಿ ನೀಡುವುದು. ಕೌಶಲ್ಯಾಭಿವೃದ್ಧಿ ಯುವಕರು ಮತ್ತು ಮಹಿಳೆಯರಿಗೆ ಸ್ವಾವಲಂಬಿ ಬದುಕಿಗಾಗಿ ವರ್ಷಕ್ಕೆ ಕನಿಷ್ಠ ಎರಡು ಕೌಶಲ್ಯ ತರಬೇತಿ ಶಿಬಿರಗಳನ್ನು ಆಯೋಜಿಸುವುದು. ಭಗವದ್ಗೀತೆ ಬೋಧನೆ ಹಾಗೂ ಸಂಸ್ಕಾರಿಕ ಕಾರ್ಯಕ್ರಮಗಳ ಮೂಲಕ ನೈತಿಕ ಮೌಲ್ಯಗಳನ್ನು ಯುವ ಜನರಲ್ಲಿ ಬೆಳೆಸಬೇಕೆಂದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತ ಮುರುಳಿಧರರಾವ್, ಕೆ.ಹನುಮಂತಪ್ಪ ಜಿಲ್ಲಾ ಯಾದವ್ ಸಂಘದ ಅಧ್ಯಕ್ಷರು, ಎ.ಮಾರೆಪ್ಪ ವಕೀಲರು, ಉಪಾಧ್ಯಕ್ಷರು, ತಿಮ್ಮಪ್ಪ ನಾಡಗೌಡ, ಹ-ರೀಶ್ ನಾಡಗೌಡ, ತಿಮ್ಮಪ್ಪ ಸಾಹುಕಾರ, ಗಟ್ಟಿ ಬೀಚಣ್ಣ, ಜನಾರ್ಧನರೆಡ್ಡಿ, ಜಿ.ಹನುಂತಪ್ಪ, ದಾನಪ್ಪ ಯಾದವ್, ಮಲ್ಲೇಶ್, ಉದಯ

## ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು: ಸಚಿವ ಕೆ.ಹೆಚ್.ಮುನಿಯಪ್ಪ



**ವಿಜಯ ದುಂಬಿ ಸುದ್ದಿ....**

**ರಾಯಚೂರು: ಸಮಾಜದಲ್ಲಿ ಪ್ರೀತಿ-ವಾತ್ಸಲ್ಯದಿಂದ ಒಟ್ಟಾಗಿ ಬಾಳುವ ಉತ್ತಮ ವಾತಾವರಣವನ್ನು ಗ್ರಾಮೀಣ ಭಾಗದಲ್ಲಿ ನಿರ್ಮಿಸಬೇಕು. ಅಶಾಂತಿ ಹಾಗೂ ಕಾನೂನು ಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವರು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಅಧಿಕಾರಿಗಳಿಗೆ ಹೇಳಿದರು.**

ಸೆಪ್ಟೆಂಬರ್ 04ರ ಶುಕ್ರವಾರ ದಂದು ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಮೃತ ಕು.ಅಶ್ವಿನಿ ಅವರ ಮನೆಗೆ ಭೇಟಿ ನೀಡಿ, ಕುಟುಂಬಕ್ಕೆ ಸಾಂತ್ವನ ಹೇಳಿ ಮಾತನಾಡಿದರು. ಈ ಹಿಂದುಳಿದ ಪ್ರದೇಶಗಳಲ್ಲಿ ವಿಶೇಷ ಕಾಳಜಿ ವಹಿಸಿ, ಅಲ್ಲಿನ ಪರಿಸ್ಥಿತಿಯನ್ನು ಸುಧಾರಿಸಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು. ಸರ್ಕಾರದ ವಿವಿಧ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಸಮುದಾಯಗಳ ಮಧ್ಯ ಉತ್ತಮ ವಾತಾವರಣ ನಿರ್ಮಿಸಲು ಎಲ್ಲಾ ಇಲಾಖೆಯ ಅಧಿಕಾರಿಗಳು ಒಟ್ಟಾಗಿ ಶ್ರಮಿಸಬೇಕು. ಮೃತ ಅಶ್ವಿನಿ ಅವರ ಕುಟುಂಬಕ್ಕೆ ಸರ್ಕಾರದಿಂದ ಅಗತ್ಯ ನೆರವು ನೀಡಲಾಗುತ್ತದೆ.

ಅಲ್ಲದೆ ಅವರ ಸಹೋದರನಿಗೆ ಸರ್ಕಾರಿ ನೌಕರಿ ನೀಡಲಾಗುತ್ತದೆ. ಹಾಗೂ ಅವರ ಜಮೀನಿಗೆ ನೀರಾವರಿ ವ್ಯವಸ್ಥೆ ಮಾಡಲು ಸೂಕ್ತ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಚಿವರು ನಿರ್ದೇಶನ ನೀಡಿದರು. ಹೊಕ್ರಾಣಿ ಗ್ರಾಮದಲ್ಲಿ ಅಶ್ವಿನಿ ಕೊಲೆ ಖಂಡಿಸಿ ನಡೆಸುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಮಾತನಾಡಿ, ದ್ವೇಷ-ಅಸೂಯೆಗಳನ್ನು ಮರೆತು, ಎಲ್ಲರೂ ಸಾಮರಸ್ಯದಿಂದ ಬದುಕು ನಡೆಸುವ ಮೂಲಕ ಮುನ್ನಡೆಯಬೇಕು. ಎಲ್ಲಿ ನಾವು ಪ್ರೀತಿ-ವಾತ್ಸಲ್ಯದ ಬದುಕನ್ನು ಮಾಡಿಕೊಂಡು ಹೋಗುತ್ತೇವೆಯೋ, ಅಲ್ಲಿ ಮಾತ್ರ ನಾವು ಮುಂದೆ ಹೋಗಲು ನಮಗೆ ಅವಕಾಶವಿದೆ ಎಂದರು. ಸಾಮರಸ್ಯವನ್ನು ಮೂಡಿಸುವುದಕ್ಕಾಗಿ 41 ವರ್ಷಗಳಿಂದ ನಿರಂತರ ಹೋರಾಟದಲ್ಲೇ ಇದ್ದೇವೆ. ಎಲ್ಲಿಯವರೆಗೆ ನಮ್ಮಲ್ಲಿ ಸಾಮರಸ್ಯ ಮೂಡುವುದಿಲ್ಲವೋ, ಅಲ್ಲಿಯವರೆಗೆ ನಮ್ಮ ನಾಡಿನಲ್ಲಿ ಅಭಿವೃದ್ಧಿ ಹಾಗೂ ಶಾಂತಿ ನೆಲೆಸುವುದು ಕಷ್ಟಸಾಧ್ಯ. ಈ ನಿಟ್ಟಿನಲ್ಲಿ ಸಮಾಜದ ಎಲ್ಲರೂ ಒಂದಾಗಿ ಕೈಜೋಡಿಸಬೇಕೆಂದು ಸಚಿವರು ಕರೆ ನೀಡಿದ್ದಾರೆ.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರತಿ ವಾರ ತಾಲೂಕು ಮಟ್ಟದಲ್ಲಿ ಸಿಇಒ ಹಾಗೂ ಎಸ್.ಪಿ ಒಳಗೊಂಡಂತೆ ವಿವಿಧ ಗ್ರಾಮಗಳಿಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಭೇಟಿ ನೀಡಿ, ಸರ್ಕಾರದ ವಿವಿಧ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್. ಎಸ್.ಭೋಸರಾಜು, ಮಾನ್ವಿ ಶಾಸಕ ಹಂಪಯ್ಯ ನಾಯಕ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಕೆ.ಪಿ. ಮೋಹನ್ ರಾಜ್, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತ ರಾಕೇಶ್ ಕುಮಾರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾ-ರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ ಸೇ-ರಿದಂತೆ ವಿವಿಧ ಇಲಾಖೆಯ ಅಧಿಕಾ-

# ದ್ವಿಚಕ್ರ ವಾಹನ, ಹಣ, ಮೊಬೈಲ್ ಕಳ್ಳತನ ಪ್ರಕರಣ ಭೇದಿಸಿದ ಪೊಲೀಸರು; ರೂ. 12.91 ಲಕ್ಷ ಮೌಲ್ಯದ ಸ್ವತ್ತು ವಶ, ಆರೋಪಿಗಳ ಬಂಧನ

**ವಿಜಯ ದುಂಬಿ ಸುದ್ದಿ....**

**ಕೊಪ್ಪಳ: ಜಿಲ್ಲೆಯ ಕೊಪ್ಪಳ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವರದಿಯಾಗಿದ್ದ ದ್ವಿಚಕ್ರ ವಾಹನ, ಹಣ ಮತ್ತು ಮೊಬೈಲ್ ಕಳ್ಳತನ ಪ್ರಕರಣಗಳನ್ನು ಕೊಪ್ಪಳ ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದು, ಈ ಕಾರ್ಯಾಚರಣೆಯಲ್ಲಿ ಆರೋಪಿಗಳನ್ನು ಬಂಧಿಸಿ, ರೂ. 12.91 ಲಕ್ಷ ಮೌಲ್ಯದ ಸ್ವತ್ತನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಸಾಹಿಲ್ ಬಾಗ್ಲಾ ಅವರು ಹೇಳಿದರು.**

ಕೊಪ್ಪಳ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಾರ್ಯಾಲಯದ ಸಭಾಂಗಣದಲ್ಲಿ ಶುಕ್ರವಾರ (ಸೆ. 4) ಕರೆದ ಸುದ್ದಿಗೋಷ್ಠಿಯಲ್ಲಿ ಅವರು ವಿವರಗಳನ್ನು ಹಂಚಿಕೊಂಡರು.

*16 ದ್ವಿಚಕ್ರ ವಾಹನಗಳ ವಶ:*

ಕೊಪ್ಪಳ ನಗರ ಪೊಲೀಸ್ ಠಾಣಾ ವ್ಯಾಪ್ತಿಯ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಆವರಣದ ದ್ವಿ-ಚಕ್ರ ವಾಹನದ ಪಾರ್ಕಿಂಗ್ ಸ್ಥಳದಲ್ಲಿ ದಿನಾಂಕ: 21.08.2026 ರಂದು ಬೆಳಗ್ಗೆ 9-15 ಗಂಟೆಯಿಂದ ಸಂಜೆ 5 ಗಂಟೆಯ ನಡುವಿನ ಅವಧಿಯಲ್ಲಿ ಫಿರ್ಯಾದಿದಾರರು ಹ್ಯಾಂಡ್ ಲಾಕ್ ಮಾಡಿ ನಿಲ್ಲಿಸಿದ್ದ ಮೋಟಾರ್ ಸೈಕಲ್ ಅಂ.ಕಿ. ರೂ 90,000 ಬೆಲೆಬಾಳವನ್ನು ಯಾರೋ ಕಳ್ಳತನ ಮಾಡಿಕೊಂಡು ಹೋದ ಬಗ್ಗೆ ಗವಿಸಿದ್ದಪ್ಪ ಕೇರಿ ಸಾ: ಹಿರೇಕಾಸಕಂಡಿ ರವರು ನೀಡಿದ ದೂರಿನ ಮೇಲಿಂದ ದಿನಾಂಕ:



25.08.2026 ರಂದು ಕೊಪ್ಪಳ ನಗರ ಪೊಲೀಸ್ ಠಾಣೆ ಗುನ್ನೆ ನಂ. 113/2026 ಕಲಂ.303(2) ಭಾರತೀಯ ನ್ಯಾಯ ಸಂಹಿತೆ-2023 ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿತ್ತು.

ಈ ಪ್ರಕರಣದ ಪತ್ತೆ ಕುರಿತು ರಚಿಸಿದ ವಿಶೇಷ ತಂಡವು ತಕ್ಷಣ ಕಾರ್ಯ ಪ್ರವೃತ್ತರಾಗಿ ವಿವಿಧ ಆಯಾಮಗಳಿಂದ ಮಾಹಿತಿಯನ್ನು ಮತ್ತು ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ಸಂಶಯಾಸ್ಪದ ವ್ಯಕ್ತಿ ಮೊಹಮ್ಮದ್ ಇರ್ಫಾನ್ ತಂದೆ ಖಾಜಾಹುಸೇನ್, ವಯ: 20ವರ್ಷ, ಉ: ಬೈಕ್ ಮೆಕ್ಯಾನಿಕ್, ಸಾ: ಕೌಲ್ ಬಜಾರ್, ಬಳ್ಳಾರಿ ಹಾ:ವಾ: ಹೊಸಪೇಟೆ, ವಿಜಯನಗರ ಜಿಲ್ಲೆ. ಎಂಬುವವನನ್ನು ಪತ್ತೆ ಮಾಡಿ ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಮೋಟಾರ್ ಸೈಕಲ್‌ಗಳನ್ನು ಕಳ್ಳತನ ಮಾಡಿರುವದಾಗಿ ಒಪ್ಪಿಕೊಂಡಿದ್ದು, ಆಪಾದಿತ ವ್ಯಕ್ತಿಯನ್ನು ದಸ್ತಗಿರಿ ಮಾಡಿ, ಅವನಿಂದ ಅಂ-ದಾಜು ಕಿಮ್ಮತ್ತು 11,90,000 ರೂ. ಬೆಲೆಬಾಳುವ ವಿವಿಧ ಕಂಪನಿಯ 16 ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಕೊಪ್ಪಳ ಉಪ-ವಿಭಾಗ, ಕೊಪ್ಪಳ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿಯ ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಕೊಪ್ಪಳ ಜಿಲ್ಲಾ ಬೋಧಕ ಆಸ್ಪತ್ರೆಯಲ್ಲಿ ದಿನಾಂಕ: 14-07-2026 ರಂದು ರಾತ್ರಿ 11 ಗಂಟೆಯಿಂದ ದಿನಾಂಕ: 29-07-2026 ರಂದು ಬೆಳಗ್ಗೆ 10-30 ಗಂಟೆಯ ನಡುವಿನ ಅವಧಿಯಲ್ಲಿ ತನ್ನ ಮಗಳ ಚಿಕಿತ್ಸೆಗೆಂದು ಬಂದಿದ್ದ ಫಿರ್ಯಾದಿದಾರರ ಮೊಬೈಲ್ ಕಳ್ಳತನ ಮಾಡಿ, ಆ ಮೊಬೈಲ್‌ನ ಬ್ಯಾಕ್ ಕವರ್‌ನಲ್ಲಿದ್ದ ಎ.ಟಿ.ಎಮ್ ಕಾರ್ಡ್ನಿಂದ ರೂ. 99,500 ಗಳನ್ನು ಬಿಡಿಸಿಕೊಂಡ ಬಗ್ಗೆ ದಿನಾಂಕ: 09-08-2026 ರಂದು ಸೀಮಣ್ಣ ಗಬ್ಬೂರು ರವರು ನೀಡಿದ ದೂರಿನ ಮೇಲಿಂದ ಕೊಪ್ಪಳ ನಗರ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:105/2026 ಕಲಂ:303(2) ಬಿ.ಎನ್.ಎಸ್-2023 ರನ್ವಯ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿತ್ತು.

ಈ ಪ್ರಕರಣದ ಪತ್ತೆ ಕುರಿತು ರಚಿಸಿದ ವಿಶೇಷ ತಂಡವು ತಕ್ಷಣ ಕಾರ್ಯ ಪ್ರವೃತ್ತರಾಗಿ ವಿವಿಧ ಆಯಾಮಗಳಿಂದ ಮಾಹಿತಿಯನ್ನು ಮತ್ತು ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ಸಂಶಯಾಸ್ಪದ ವ್ಯಕ್ತಿ ಮಂಜುನಾಥ ತಂದೆ ಚಿನ್ನಪ್ಪ ಚಕ್ರಸಾಲಿ ವಯ: 32ವರ್ಷ, ಉ: ಹೋಟೆಲ್ ಕೆಲಸ, ಸಾ: ಬೂದಗುಂಪಾ ಎಂಬುವವನನ್ನು ಪತ್ತೆ ಮಾಡಿ ವಶಕ್ಕೆ ಪಡೆದು ವಿಚಾರಣೆ ಮಾಡಿದಾಗ ಮೋಟಾರ್ ಸೈಕಲ್‌ಗಳನ್ನು ಕಳ್ಳತನ ಮಾಡಿಕೊಂಡಿರುವದಾಗಿ ಒಪ್ಪಿಕೊಂಡಿದ್ದು, ಆಪಾದಿತ ವ್ಯಕ್ತಿಯನ್ನು ದಸ್ತಗಿರಿ ಪತ್ತೆ ಮಾಡಿ, ಈ ಆರೋಪಿತನಿಂದ ರೂ. 99,500 ಮತ್ತು ಒಂದು ಓಪ್ಪೋ ಮೊಬೈಲ್ ಫೋನ್‌ನ್ನು ಜಪ್ತಿಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು.

ಈ ಎಲ್ಲಾ ಪ್ರಕರಣಗಳ ಪತ್ತೆ ಕು-ರಿತು ಜಿಲ್ಲಾ ಪೊಲೀಸ್ ಅಧೀಕ್ಷಕರು, ಹೆಚ್ಚುವರಿ ಎಸ್.ಪಿ ಮತ್ತು ಡಿ.ವೈಎಸ್.ಪಿ ಕೊಪ್ಪಳ ರವರ ಮಾರ್ಗದರ್ಶನದಲ್ಲಿ ಕೊಪ್ಪಳ ನಗರ ಠಾಣೆಯ ಪಿ.ಐ. ಮತ್ತು ಪಿ.ಎಸ್.ಐ (ಕಾಹಿಸು) ಹೀರಪ್ಪ, ಎ.ಎಸ್.ಐ ಶಂಕ್ರಯ್ಯ ಸಾರಂಗಮಠ, ಸಿಬ್ಬಂದಿಯವರಾದ ಹೆಚ್‌ಸಿ ಖಾಜಾಸಾಬ, ಗಂಗಾಧರ, ಗಣೇಶ ಮತ್ತು ಸಿಪಿಸಿ ರವರಾದ ಮಂಜುನಾಥ, ಮಂಗಳೇಶ, ಗೂಡಸಾಬ, ಮಲ್ಲಿಕಾರ್ಜುನ, ತನಿಖಾ ಸಹಾಯಕರಾದ ಕುಮಾರಸ್ವಾಮಿ, ಲಕ್ಷ್ಮಿದೇವಿ ಕೆ. ಮಪಿಸಿ, ಬಸಯ್ಯ, ಶಂಕ್ರಪ್ಪ ಎಪಿಸಿ ಮತ್ತು ಡಿಪಿಓ ತಾಂತ್ರಿಕ ವಿಭಾಗದ ಪ್ರಸಾದ್ ಎಪಿಸಿ, ಮಂಜುನಾಥ ಎಪಿಸಿ ಇವರನ್ನೊಳಗೊಂಡ ವಿಶೇಷ ತಂಡ ರಚಿಸಲಾಗಿತ್ತು ಎಂದರು. ಈ ಎರಡು ಸ್ವತ್ತಿನ ಪ್ರಕರಣದಲ್ಲಿ ಆಪಾದಿತರನ್ನು ಪತ್ತೆ ಮಾಡಿ, ರೂ. 11,90,000 ಮೌಲ್ಯದ 16 ಮೋಟಾರ್ ಸೈಕಲ್, ರೂ. 2000 ಮೌಲ್ಯದ ಮೊಬೈಲ್ ಮತ್ತು 99,500 ರೂ. ನಗದು ಹಣ ಒಟ್ಟು 12,91,500 ಮೌಲ್ಯದ ಕಳ್ಳತನವಾದ ಸ್ವತ್ತು ನಗದು ಹಣ ವಶಪಡಿಸಿಕೊಂಡು, ಪ್ರಕರಣವನ್ನು ಪತ್ತೆ ಮಾಡಿ, ಉತ್ತಮ ಪತ್ತೆ ಕಾರ್ಯ ಮಾಡಿದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರ ತಂಡದ ಕಾರ್ಯಕ್ಕೆ ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಸಾಹಿಲ್ ಬಾಗ್ಲಾ ಅವರು ಇದೇ ವೇಳೆ ಪ್ರಶಂಸೆ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಹೇಮಂತಕುಮಾರ, ಕೊಪ್ಪಳ ಡಿ.ವೈಎಸ್.ಪಿ ಮುತ್ತಣ್ಣ ಸರವಗೋಳ, ಕೊಪ್ಪಳ ನಗರ ಪೊಲೀಸ್ ಠಾಣೆಯ ಪಿ.ಐ ಸುರೇಶ

# ಕೆ.ಎಂ.ಇ.ಆರ್.ಸಿ. ಅಡಿ ಜಿಲ್ಲೆಗೆ ರೂ.3,574 ಕೋಟಿ ಅನುದಾನ ಅನುಮೋದನೆ ; ನಿರ್ಗಮಿತ ಜಿಲ್ಲಾಧಿಕಾರಿ ಟಿ. ವೆಂಕಟೇಶ್

**ವಿಜಯ ದುಂಬಿ ಸುದ್ದಿ....**

**ಚಿತ್ರದುರ್ಗ: ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಹಾಗೂ ಗಣಿ ಭಾಧಿತ ಪ್ರದೇಶಗಳ ಪುನರುಜ್ಜೀವನಕ್ಕಾಗಿ 33 ಇಲಾಖೆಗಳಿಗೆ ಒಟ್ಟಾರೆಯಾಗಿ ರೂ.3,574 ಕೋಟಿ ಕಾಮಗಾರಿಗಳಿಗೆ ಕೆ.ಎಂ.ಇ.ಆರ್.ಸಿಯಿಂದ ಅನುದಾನಕ್ಕೆ ಅನುಮೋದನೆ ದೊರಕಿದೆ ಎಂದು ನಿರ್ಗಮಿತ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ. ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಚಿತ್ರದುರ್ಗ ಜಿಲ್ಲಾ ಘಟಕ ವತಿಯಿಂದ ನಗರದ ಪತ್ರಿಕಾ ಭನದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.**

ಚಿತ್ರದುರ್ಗ ಜಿಲ್ಲಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ನಂತರ, ಹಿಂದುಳಿದ ಈ ಜಿಲ್ಲೆಯ ಅಭಿವೃದ್ಧಿಗೆ ಆದ್ಯತೆ ನೀಡಿ, ಕೆ.ಎಂ.ಇ.ಆರ್.ಸಿ ಸೆಲ್ ನೊಂದಿಗೆ 100 ಹೆಚ್ಚು ಸಭೆಗಳನ್ನು ನಡೆಸಿ ಸತತ ಪ್ರಯತ್ನ ನಡೆಸಿದ್ದರ ಪರಿಣಾಮವಾಗಿ, ಜಿಲ್ಲೆಯ ಪುನರುಜ್ಜೀವನ ಮತ್ತು ಅಭಿವೃದ್ಧಿಗಾಗಿ ಸಲ್ಲಿಸಲಾಗಿದ್ದ ಎಲ್ಲಾ ಪ್ರಸ್ತಾಪನೆಗಳಿಗೆ ಅನುಮೋದನೆ ದೊರೆತಿದೆ. ಅರಣ್ಯೀಕರಣ, ಸಸಿ ನೆಡುವುದು, ವನ್ಯಜೀವಿಗಳಿಗೆ ನೀರಿನ ವ್ಯವಸ್ಥೆ ಸೇರಿದಂತೆ ಅರಣ್ಯ ಅಭಿವೃದ್ಧಿಗೆ ರೂ.485 ಕೋಟಿ, ಭೀಮಸಮುದ್ರ ಭಾಗದಲ್ಲಿ ಗಣಿಗಾ–ರಿಕೆ ಸಾರಿಗೆಗೆ ರೂ. 450 ಕೋಟಿ ವೆಚ್ಚದಲ್ಲಿ ಪ್ರತ್ಯೇಕ ಕ್ಯಾರಿಡಾರ್ ನಿರ್ಮಾಣ, ಜಿಲ್ಲೆಯ ಅಂಗನವಾಡಿಗಳ ನಿರ್ಮಾಣ ಮತ್ತು ನವೀಕರಣಕ್ಕಾಗಿ ರೂ.375 ಕೋಟಿ, ಜಲಾನಯನ ಇಲಾಖೆಗೆ ರೂ.354 ಕೋಟಿ, ಗ್ರಾಮೀಣ ಕುಡಿಯುವ ನೀರುಗೆ ರೂ.496 ಕೋಟಿ, ನಗರ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗಳಿಗೆ ರೂ.165 ಕೋಟಿ, ಗ್ರಾಮೀಣ ಭಾಗದ ರಸ್ತೆಗಳಿಗೆ ರೂ.280 ಕೋಟಿ, ಸಣ್ಣ ನೀರಾವರಿ ಇಲಾಖೆಗೆ ರೂ.270 ಕೋಟಿ, ಸಮಾಜ ಕಲ್ಯಾಣ ವಿದ್ಯಾರ್ಥಿನಿಲಯಗಳ ಅಭಿವೃದ್ಧಿ ರೂ.185 ಕೋಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಿದ್ಯಾರ್ಥಿ ನಿಲಯಗಳಿಗೆ ರೂ.150 ಕೋಟಿ,

ಆರೋಗ್ಯ ಇಲಾಖೆಗೆ ರೂ.141 ಕೋಟಿ ಹಾಗೂ ಜಿಲ್ಲಾ ಆಸ್ಪತ್ರೆಗೆ ರೂ.114 ಕೋಟಿ, ಅಲ್ಪಸಂಖ್ಯಾತರ ಇಲಾಖೆಗೆ ರೂ.20 ಕೋಟಿ, ಶಿಕ್ಷಣ ಕ್ಷೇತ್ರಕ್ಕೆ ರೂ.280 ಕೋಟಿ, ಚಿತ್ರದುರ್ಗ ಕೋಟೆಗೆ 'ಸೌಂಡ್ ಅಂಡ್ ಲೈಟ್' ವ್ಯವಸ್ಥೆಗೆ ರೂ.30 ಕೋಟಿ ಅನುದಾನ ಕೆ.ಎಂ.ಇ.ಆರ್.ಸಿ ಅಡಿ ಲಭ್ಯವಾಗಿದೆ. ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಾಧೀಶರ ನೇತೃತ್ವದ ಸಮಿತಿಯು ಈ ಅನುದಾನಕ್ಕೆ ಅನುಮೋದನೆ ನೀಡಿದ್ದು, ಎಲ್ಲಾ ಯೋಜನೆಗಳ ಡಿಪಿಆರ್ ಸಿದ್ಧಗೊಂಡು ಹಣ ಬಿಡುಗಡೆಯಾಗಿದೆ. ಮುಂದಿನ ಎರಡು ವರ್ಷಗಳಲ್ಲಿ ಈ ಕಾಮಗಾರಿಗಳು ಪೂರ್ಣಗೊಳ್ಳಲಿವೆ ಎಂದು ವಿವರಿಸಿದರು.

ಮೈನಿಂಗ್ ಸಂತ್ರಸ್ತರಿಗೆ ರೂ.11 ಲಕ್ಷ ವೆಚ್ಚದಲ್ಲಿ ಉಚಿತ ಮನೆ: ಗಣಿಗಾರಿಕೆ ಪೀಡಿತ ಚಿತ್ರದುರ್ಗ, ಹೊಳಲ್ಕೆರೆ, ಹೊಸದುರ್ಗ ಹಾಗೂ ಮೊಳಕಾಲ್ಮೂರು ತಾಲೂಕುಗಳ 5 ಕಿ.ಮೀ ವ್ಯಾಪ್ತಿಯಲ್ಲಿ ಬರುವ ಸುಮಾರು 15,000 ಮನೆರಹಿತ



ಕುಟುಂಬಗಳಿಗೆ ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ತಲಾ ರೂ.11 ಲಕ್ಷ ವೆಚ್ಚದಲ್ಲಿ ಉಚಿತ ಮನೆ ನಿರ್ಮಿಸಲಾಗುತ್ತಿದೆ.

ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ. 'ನಿವೇಶನ ರಹಿತ ಜಿಲ್ಲೆ' ಮಾಡುವ ಗುರಿ: ಜಿಲ್ಲೆಯನ್ನು ನಿವೇಶನ ರಹಿತ ಜಿಲ್ಲೆಯನ್ನಾಗಿ ಮಾಡಲು 1,000 ಎಕರೆಗೂ ಹೆಚ್ಚು ಭೂಮಿ ಕಾಯ್ದಿರಿಸಲಾಗಿದ್ದು, ಇದರಿಂದ 30,000 ಕುಟುಂಬಗಳಿಗೆ ನಿವೇಶನ ಲಭಿಸಲಿದೆ. 'ಭೂ ಸುರಕ್ಷಾ' ಅಡಿಯಲ್ಲಿ 5.17 ಕೋಟಿ ಪುಟಗಳ ದಾಖಲೆ ಗಣಕೀಕರಣ ಮಾಡಲಾಗಿದೆ. ರಾಜ್ಯದಲ್ಲಿಯೇ ಗಣಕೀಕರಣ ಮಾಡುವಲ್ಲಿ ಮೊಳಕಾಲ್ಮೂರು ತಾಲೂಕು ರಾಜ್ಯಕ್ಕೇ ಪ್ರಥಮ ಸ್ಥಾನ ಪಡೆದಿದೆ. 72,731 ರೈತ–ರಿಗೆ ಪೌತಿ ಖಾತೆ, 6,000 ಎಸ್‌ಸಿ/ಎಸ್‌ಟಿ ರೈತ ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ, ಜಿಲ್ಲೆಯ 390 ತಾಂಡಾ/ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಣೆ ಹೀಗೇ ಕಂದಾಯ ಇಲಾಖೆಯ ಸೇವೆಗಳನ್ನು ಜನರಿಗೆ ದೊರಕುವಂತೆ ಮಾಡಿದ್ದಾನೆ. ಕಂದಾಯ ದಾಖಲೆಗಳ ಡಿಜಿಟಲೀಕರಣಗೊಳಿಸಿದ್ದಕ್ಕಾಗಿ ರಾಜ್ಯ ಮಟ್ಟದಲ್ಲಿ ಜಿಲ್ಲೆಗೆ ಪ್ರಶಸ್ತಿ ಸಹ ಲಭಿಸಿದ್ದನ್ನು ಟಿ.ವೆಂಕಟೇಶ್ ಈ ವೇಳೆ ಸ್ಮರಿಸಿದರು.

ಜಿಲ್ಲೆಯ ಕೈಗಾರಿಕೆ ಅಭಿವೃದ್ಧಿಗಾಗಿ ಮೇಟಿಕುರ್ಕೆ ಬಳಿ ಕೆಐಎಡಿಬಿ ಮೂಲಕ 300–400 ಎಕರೆ ಜಮೀನು ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ. ಕೈಗಾರಿಕಾ ಲೇ ಔಟ್‌ಗಳು ಸಹ ನಿರ್ಮಾಣವಾಗುತ್ತಿವೆ. ಜಿಲ್ಲೆಯ ಬಹುದಿನಗಳ ಬೇಡಿಕೆಯಾದ ತುಮಕೂರು–ದಾವಣಗೆರೆ ನೇರ ರೈಲು ಮಾರ್ಗಕ್ಕೆ 1,200 ಎಕರೆ ಭೂಸ್ವಾಧೀನ, ಎನ್.ಹೆಚ್. 150ಎ ಹಾಗೂ ಹೊಸದುರ್ಗ–ಹುಳಿಯಾರ್ ಹೆದ್ದಾರಿ ಕಾಮಗಾರಿ ಪೂರ್ಣಗೊಳಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿರುವುದಾಗಿ ಟಿ.ವೆಂಕಟೇಶ್ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ನಗರದ ಹೃದಯ ಭಾಗದಲ್ಲಿ ನಿರ್ಮಾಣ ಮಾಡುವ ದೃಷ್ಟಿಯಿಂದ 15 ಎಕರೆ ಜಮೀನು ಮಂಜೂರು ಮಾಡಿ, ತಾತ್ವಿಕ ಒಪ್ಪಿಗೆ ಪಡೆಯಲಾಗಿದೆ. ಜನರು ತಮ್ಮನ್ನು ಬರಿ ಮಾತಿನಿಂದ ಅಥವಾ ನಡವಳಿಕೆಯಿಂದ ನೆನಪಿನಲ್ಲಿಟ್ಟುಕೊಳ್ಳುವುದಕ್ಕಿಂತ, ಜಿಲ್ಲೆಯಲ್ಲಿ ಮಾಡಿದ ಕೆಲಸಗಳಿಂದ ಗುರುತಿಸಬೇಕು ಎಂಬುದು ತಮ್ಮ ಆಶಯ ಎಂದರು.

ಇನ್ನು ಎರಡು ವರ್ಷಗಳ ನಂತರ ಜಿಲ್ಲೆಯಲ್ಲಿ ಹೊಸ ಅಂಗನವಾಡಿ, ಶಾಲಾ ಕಟ್ಟಡ, ಹಾಸ್ಟೆಲ್ ಹಾಗೂ ರಸ್ತೆಗಳು ನಿರ್ಮಾಣಗೊಂಡಿದ್ದರೆ, ಅದು ತಮ್ಮ ಆಡಳಿತ ಅವಧಿಯ ಕೊಡುಗೆಯಾಗಿ ನೆನಪಿರಲಿದೆ ಎಂದು ಟಿ. ವೆಂಕಟೇಶ್ ಅಭಿಪ್ರಾಯಪಟ್ಟರು. ಮಾಧ್ಯಮಗಳು, ಸಾರ್ವಜನಿಕರು ಮತ್ತು ಜನಪ್ರತಿನಿಧಿಗಳ ಸಹಕಾರದಿಂದ ತಮ್ಮ ಅವಧಿಯಲ್ಲಿ ಯಾವುದೇ ಕಾನೂನು–ಸುವ್ಯವಸ್ಥೆ ಸಮಸ್ಯೆ ಅಥ–'ವಾ ಭಿನ್ನಾಭಿಪ್ರಾಯಗಳು ಎದುರಾಗಲಿಲ್ಲ. ಪತ್ರಕರ್ತರು ತೋರಿದ ಪ್ರೀತಿ, ಆತ್ಮೀಯತೆ ಮತ್ತು ಸಹಕಾರಕ್ಕೆ ಈ ಸಂದರ್ಭದಲ್ಲಿ ಅವರು ಕೃತಜ್ಞತೆ ಸಲ್ಲಿಸಿದರು. ಈ ವೇಳೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ವಾರ್ತಾ ಮತ್ತು ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು ಜುಂಜಣ್ಣ,

ಅಧ್ಯಕ್ಷರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ವಿನಾಯಕ.ಬಿ. ಎಸ್, ರಾಜ್ಯ ಮಾಧ್ಯಮ ಅಕಾಡೆಮಿ ಸದಸ್ಯ ಎಂ.ಎನ್.ಅಹೊಬಲಪತಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ರಾಜ್ಯ ಸಮಿತಿ ಸದಸ್ಯ ಸಿದ್ದರಾಜು ಎಸ್, ಪ್ರಧಾನ ಕಾರ್ಯದರ್ಶಿ ವೀರೇಶ್.ವಿ, ಕಾರ್ಯಕಾರಿ ಸಮಿತಿ ಸದಸ್ಯ ಎಸ್.ಬಿ.ರವಿಕುಮಾರ್, ಹಿರಿಯ ಪತ್ರಕರ್ತರಾದ ಹೆಂಜಾರಪ್ಪ, ರವಿಮಲ್ಲಾಪುರ ಜಡೇಕುಂಟೆ ಮಂಜುನಾಥ್,ಕುಮಾರಸ್ವಾಮಿ, ಸಿ.ಪಿ.ಮಾರುತಿ ಸೇರಿದಂತೆ ಮಾಧ್ಯಮ ಮಿತ್ರರು, ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

## ಶ್ರೀ ಕೃಷ್ಣ ಜನ್ಮಾಷ್ಟಮಿ ಸಂಭ್ರಮ

**ವಿಜಯ ದುಂಬಿ ಸುದ್ದಿ....**

**ಬೆಂಗಳೂರು: ನಗರದ ಸಿಂಗಸಂದ್ರದ ಎಇಸಿಎಸ್ ಲೇಔಟ್‌ನಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಅತ್ಯಂತ ಸಡಗರ–ಸಂಭ್ರಮ ಹಾಗೂ ಭಕ್ತಿಭಾವದಿಂದ ಆಚರಿಸಲಾಯಿತು. ಇಲ್ಲಿನ ಪ್ರಮುಖ ಉದ್ಯಮಿ ಮೋಹನ್ ಕುಮಾರ್ ಅವರ ನಿವಾಸದಲ್ಲಿ ಶ್ರೀ ಕೃಷ್ಣನಿಗೆ ಶಾಸ್ತ್ರೋಕ್ತವಾಗಿ ವಿಶೇಷ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು.**



ಹಬ್ಬದ ಅಂಗವಾಗಿ ಬಾಲಕೃಷ್ಣನ ವಿಗ್ರಹಕ್ಕೆ ಮನಮೋಹಕ ಅಲಂಕಾರ ಮಾಡಿ, ವಿವಿಧ ಬಗೆಯ ಹಣ್ಣು–ಹಂಪಲುಗಳು ಹಾಗೂ ವೈವಿಧ್ಯಮಯ ತಿಂಡಿ–ತಿನಿಸುಗಳನ್ನು ನೈವೇದ್ಯವಾಗಿ ಅರ್ಪಿಸಿ ಧನ್ಯತೆ ಮೆರೆಯಲಾಯಿತು. ಕುಟುಂಬದ ಸದಸ್ಯರು, ಬಂಧು–ಮಿತ್ರರು ಈ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಶ್ರೀ ಕೃಷ್ಣನ ಕೃಪೆಗೆ ಪಾತ್ರರಾದರು.

ವಿಜಯ ದುಂಬಿ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಜಿಲ್ಲಾಡಳಿತ ಭವನದಲ್ಲಿ ಶ್ರೀ ಕೃಷ್ಣ ಜಯಂತಿ ಆಚರಣೆ

**ವಿಜಯ ದುಂಬಿ ಸುದ್ದಿ....**

**ಬೆಂ.ಗ್ರಾ.ಜಿಲ್ಲೆ: ಭಗವಾನ್ ಶ್ರೀ ಕೃಷ್ಣ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ಡಾ.ಕೆ.ಎನ್ ಅನುರಾಧ ಅವರು ಶ್ರೀ ಕೃಷ್ಣರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.**



ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ವತಿಯಿಂದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕಚೇರಿ ಸಹಾಯಕ ರಾಜೀವ್ ಲೋಚನಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕರು ಅಶೋಕ್ ಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಕಲ್ಪನ, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

## ಕೃಷ್ಣ ಜನ್ಮಾಷ್ಟಮಿ ಆಚರಣೆ ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುತ್ತದೆ

**ವಿಜಯ ದುಂಬಿ ಸುದ್ದಿ....**

**ಪೀಣ್ಯ ದಾಸರಹಳ್ಳಿ: ಶಾಲೆಗಳಲ್ಲಿ ಕೃಷ್ಣ ಜನ್ಮಾಷ್ಟಮಿಯನ್ನು ಆಚರಿಸುವುದು ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುತ್ತದೆ. ಇದು ಭಗವಾನ್ ಕೃಷ್ಣನ ಜನ್ಮದಿನವನ್ನು ಆಚರಿಸುವ ಹಬ್ಬವಾಗಿದೆ ಮತ್ತು ಈ ಹಬ್ಬವನ್ನು ಶಾಲೆಯಲ್ಲಿ ಆಚರಿಸುವುದರಿಂದ ಮಕ್ಕಳಿಗೆ ಭಕ್ತಿ, ಪ್ರೀತಿ, ಮತ್ತು ಧೈರ್ಯದಂತಹ ಮೌಲ್ಯಗಳನ್ನು ತಿಳಿಯಲು ಸಹಾಯ ಮಾಡುತ್ತದೆ ಎಂದು ವಿದ್ಯಾಮಾನ್ಯ ವಿದ್ಯಾಕೇಂದ್ರದ ನಿರ್ದೇಶಕ ಸೌಂದರ್ಯ ಭರತ್ ತಿಳಿಸಿದರು.**

ದಾಸರಹಳ್ಳಿ ಸಮೀಪದ ಆಂಧ್ರಹಳ್ಳಿಯಲ್ಲಿರುವ ಶ್ರೀ ವಿಧ್ಯಾಮಾನ್ಯ ವಿದ್ಯಾಕೇಂದ್ರದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಅಚರಿಸಲಾಯಿತು. ಜನ್ಮಾಷ್ಟಮಿ ಆಚರಣೆಯು ವಿದ್ಯಾರ್ಥಿಗಳಿಗೆ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ಅರಿವು ಮೂಡಿಸುತ್ತದೆ. ಕೃಷ್ಣನ









ಜೀವನದ ಕಥೆಗಳು ಮತ್ತು ಆಚರಣೆಗಳನ್ನು ತಿಳಿದುಕೊಳ್ಳಲು ಅವಕಾಶ ಸಿಗುತ್ತದೆ. ಕೃಷ್ಣನ ಬೋಧನೆಗಳು ವಿದ್ಯಾರ್ಥಿಗಳಿಗೆ ಸತ್ಯ, ನ್ಯಾಯ, ಮತ್ತು ಧರ್ಮದ ಮಾರ್ಗದಲ್ಲಿ ನಡೆಯಲು ಪ್ರೇರಣೆ ನೀಡುತ್ತವೆ ಎಂದರು.

ಶಾಲೆಗಳಲ್ಲಿ ಜನ್ಮಾಷ್ಟಮಿ ಆಚ–'ರಣೆಯು ವಿದ್ಯಾರ್ಥಿಗಳು ಮತ್ತು ಶಿಕ್ಷಕರ ನಡುವೆ ಬಾಂಧವ್ಯವನ್ನು ಬೆಳೆಸುತ್ತದೆ ಮತ್ತು ಒಟ್ಟಾಗಿ ಕೆಲಸ ಮಾಡುವ ಪ್ರವೃತ್ತಿಯನ್ನು ಬೆಳೆಸುತ್ತದೆ ಜನ್ಮಾಷ್ಟಮಿಯ ಆಚ–'ರಣೆಯು ಶಾಲೆಯಲ್ಲಿ ಸಂತೋಷ ಮತ್ತು ಸಂಭ್ರಮದ ವಾತಾವರಣವನ್ನು ಸೃಷ್ಟಿಸುತ್ತದೆ. ಕೃಷ್ಣ ರಾಧೆ ವೇಷದಲ್ಲಿ ಮಕ್ಕಳು ನೃತ್ಯಮಾಡುವುದರ ಮೂಲಕ ನೋಡುಗರ ಗಮನ ಸೆಳೆದರು. ಈ ಸಂಧರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಇನ್ನೂ ಮುಂತಾದವರು ಉಪಸ್ಥಿತರಿದ್ದರು.

## ಚೇಳೂರು ತಾಲ್ಲೂಕು ಕಛೇರಿಯಲ್ಲಿ ಶ್ರೀ ಕೃಷ್ಣ ಜನ್ಮಷ್ಟಮಿ ಆಚರಣೆ.



**ವಿಜಯ ದುಂಬಿ ಸುದ್ದಿ....**

**ಚೇಳೂರು: ತಾಲ್ಲೂಕು ತಾಹಸೀಲ್ದಾಲ್ ಬಿ. ಕೆ. ಶ್ವೇತಾ ಮಾತನಾಡಿ ಈ ವರ್ಷ ನಮ್ಮ ಚೇಳೂರು ತಾಲ್ಲೂಕಿನಲ್ಲಿ ಬೆಳೆಗಳು ಇಲ್ಲದೆ ರ?ತರು ಕಂಗಾಲಾಗಿದ್ದಾರೆ ಜನರಿಗೆ ಒಳ್ಳೆಯ ಮಳೆ ಬೆಲೆ ಬರಲಿ ದೇವರಲ್ಲಿ ಪ್ರಾರ್ಥನೆ ಮಾಡುತಾ ಈ ದಿನ ಚಂದ್ರ, ಗುರು, ಸೂರ್ಯ, ಇತ್ಯಾದಿ ಗ್ರಹಗಳ ಸಂಯೋಗದಿಂದಾಗಿ ಶುಭ ಯೋಗದ ನಿರ್ಮಾಣವಾಗಲಿ ಎಂದರು.**

ಕೃಷ್ಣಜನ್ಮಾಷ್ಟಮಿಯ ದಿನದಂದು, ಮನೆ ಮತ್ತು ದೇವಾಲಯಗಳನ್ನು ಸುಂದರವಾಗಿ ಅಲಂಕರಿಸಲಾಗುತ್ತದೆ. ಕೃಷ್ಣನ ಪುಟ್ಟ ಹೆಜ್ಜೆಗಳನ್ನು ರಂಗೋಲಿಯಲ್ಲಿ ಬರೆದು ಸಂಭ್ರಮಿಸಲಾಗುತ್ತದೆ. ಕೃಷ್ಣನ ವಿಗ್ರಹಗಳನ್ನು ವಿಧವಿಧವಾಗಿ ಅಲಂಕರಿಸಿ, ಬಗೆಬಗೆಯ ತಿಂಡಿಗಳನ್ನು ಮಾಡಿ ಬಾಲ ಕೃಷ್ಣನನ್ನುಪೂಜಿಸಲಾಗುತ್ತದೆ. ಕೆಲವು ಕಡೆ, ಮಧ್ಯರಾತ್ರಿಯವರೆಗೆ ಉಪವಾಸವಿದ್ದು, ನಂತರ ಆಹಾರ ಸ್ವೀಕರಿಸುವ ಸಂಪ್ರದಾಯವಿದೆ.ಎಂದರು ಈ ಬಾರಿ ಸೆಪ್ಟೆಂಬರ್ 4ರಂದು ಕೃಷ್ಣ ಜನ್ಮಾಷ್ಟಮಿ ಬಂದಿದೆ. ಕೃಷ್ಣ ಜನ್ಮಾಷ್ಟಮಿಯ ದಿನದಂದು ಕೃಷ್ಣನಿಗೆ ಬಲು ಪ್ರಿಯವಾದ ಸಿಹಿ ಅವಲಕ್ಕಿ ಖಾದ್ಯವನ್ನು ಮಾಡಬಹುದು. ಇದು ಅತ್ಯಂತ ಸುಲಭ ಹಾಗೂ ಪೋಷಕವಾದ ತಿಂಡಿಯಾಗಿದೆ.

ಬೆಲ್ಲ ಹಾಗೂ ತೆಂಗಿನಕಾಯಿಯ ಸವಿಯೊಂದಿಗೆ ಸಿಹಿ ಅವಲಕ್ಕಿ ಖಾದ್ಯವನ್ನು ಇಡಬಹುದು ಜನ್ಮಾಷ್ಟಮಿಯ ಮರುದಿನ 'ಮೊಸರು ಮಡಿಕೆ' (ದಹಿ ಹಂಡಿ) ಒಡೆಯುವ ಸಂಪ್ರದಾಯವೂ ಹಲವೆಡೆ ನಡೆಯುತ್ತದೆ. ಯುವಕರು ಮಾನವ ಪಿರಮಿಡ್ ರಚಿಸಿ ಎತ್ತರದಲ್ಲಿ ಕಟ್ಟಿದ ಮಡಿಕೆಯನ್ನು ಒಡೆಯುವ ಮೂಲಕ ಕೃಷ್ಣನ ಬಾಲ್ಯದ ಲೀಲೆಗಳನ್ನು ಸ್ಮರಿಸುತ್ತಾರೆ.ಎಂದರು ಈ ಸಂದರ್ಭದಲ್ಲಿ ಸಿರಸ್ತೇದ್ದಾರ್ ಸತೀಶ್ ಆರ್. ಐ. ಈಶ್ವರ್. ಗ್ರಾಮ ಲೇಕಾದಿಕ್ಕಾರಿ ವೆಂಕಟೇಶ್. ರಂಜಿತಾ. ಅರುಣಾ ಯಾದವ ಸಂಘದ ಅಧ್ಯಕ್ಷರಾದ ಜಿ.ವಿ. ಶ್ರೀನಿವಾಸ್ ಮುಖಂಡರಾದ ಮುನಿರೆಡ್ಡಿ. ಮಂಜುನಾಥ್ ಕೆ ಆರ್ ರಾಮಾಂಜಿ ಆರ್ ಎಸ್ ಶ್ರೀನಿವಾಸ್ ಎನ್ ನಾಗರಾಜು ಜಿ.ಎಂ ಮುನಿರಾಜು ಮುರಳಿ ಶ್ರೀನಿವಾಸ್ ಮುಂತಾದವರು ಇದ್ದರು

## ಬಾಗೇಪಲ್ಲಿಯ ಯಂಗ್ ಇಂಡಿಯಾ ಶಾಲೆಯಲ್ಲಿ ವಿಜೃಂಭಣೆಯ ಕೃಷ್ಣಾಷ್ಟಮಿ ಆಚರಣೆ

**ವಿಜಯ ದುಂಬಿ ಸುದ್ದಿ....**

**ಬಾಗೇಪಲ್ಲಿ ಪಟ್ಟಣದ ಯಂಗ್ ಇಂಡಿಯಾ ಸ್ಕೂಲ್‌ನಲ್ಲಿ ಕೃಷ್ಣಾಷ್ಟಮಿ (ಶ್ರೀ ಕೃಷ್ಣ ಜನ್ಮಾಷ್ಟಮಿ) ಹಬ್ಬವನ್ನು ಶಿವಪ್ಪ ಸಾರ್ ರವರ ನೇತೃತ್ವದಲ್ಲಿ ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಯಿತು. ಶಾಲೆಯ ಆವರಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ನೂರಾರು ಪುಟ್ಟ ಮಕ್ಕಳು ಶ್ರೀ ಕೃಷ್ಣ, ರಾಧೆ ಹಾಗೂ ಗೋಪಿಕೆಯರ ಸಾಂಪ್ರದಾಯಿಕ ವೇಷಭೂಷಣಗಳನ್ನು ಧರಿಸಿ ಕಣ್ಣುಮನ ಸೆಳೆದರು.**

ಹಳದಿ ವಸ್ತ್ರಗಳು, ನವಿಲುಗರಿ, ಮುರಳಿ (ಕೊಳಲು) ಹಿಡಿದು ಮಿಂಚಿದ ಕೃಷ್ಣನ ವೇಷಧಾರಿ ಮಕ್ಕಳು ಮತ್ತು ಅಲಂಕೃತ ರಾಧೆಯ ವೇಷದಲ್ಲಿದ್ದ ವಿದ್ಯಾರ್ಥಿಗಳು ಹಬ್ಬದ ಕಳೆಯನ್ನು ಹೆಚ್ಚಿಸಿದರು. ಶಾಲಾ ಆಡಳಿತ ಮಂಡಳಿಯ ಶಿವಪ್ಪ ರವರು





ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, "ಮಕ್ಕಳಲ್ಲಿ ಧಾರ್ಮಿಕ ಮತ್ತು ಸಾಂಸ್ಕೃತಿ–ಕ ಮೌಲ್ಯಗಳನ್ನು ಬೆಳೆಸಲು ಇಂತಹ ಹಬ್ಬಗಳ ಆಚರಣೆಗಳು ಅಗತ್ಯ. ಶ್ರೀ ಕೃಷ್ಣನ ಜೀವನದ ತತ್ವಗಳು ಮತ್ತು ಮೌಲ್ಯಗಳನ್ನು ಬಾಲ್ಯದಲ್ಲೇ ಮಕ್ಕಳಿಗೆ ತಿಳಿಸಿಕೊಡುವುದು ನಮಗಷ್ಟೇ ಅಲ್ಲ, ಸಮಾಜಕ್ಕೂ ಉತ್ತಮ ಮಾರ್ಗದರ್ಶನ ನೀಡುತ್ತದೆ" ಎಂದು ತಿಳಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಗಳು: ಸಾಂಸ್ಕೃತಿಕ ವೇಷಭೂಷಣ ಸ್ಪರ್ಧೆ: ಶಾಲಾ ಆವರಣದ ನೀಲಿ ಹಿನ್ನೆಲೆಯ ವೇದಿಕೆಯಲ್ಲಿ ಕೃಷ್ಣ ಮತ್ತು ರಾಧೆಯರ ವೇಷದಲ್ಲಿದ್ದ ಪುಟ್ಟ ಕಂದಮ್ಮಗಳು ಕಾರ್ಯಕ್ರಮಕ್ಕೆ ಮೆರುಗು ತಂದರು. ?ಶಾಲಾ ಸಿಬ್ಬಂದಿ ಭಾಗಿ: ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ಪೋಷಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕೃಷ್ಣಾಷ್ಟಮಿಯ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ?ಕಾರ್ಯಕ್ರಮದ ಕೊನೆಯಲ್ಲಿ ಭಕ್ತಾದಿಗಳಿಗೆ ಹಾಗೂ ಮಕ್ಕಳಿಗೆ ಸಿಹಿ ಮತ್ತು ಪ್ರಸಾದವನ್ನು ವಿತರಿಸಲಾಯಿತು.

## ರೇಷ್ಮೆ ನಗರಿ ಶಿಡ್ಲಘಟ್ಟದಲ್ಲಿ ಕೃಷ್ಣ ಜನ್ಮಾಷ್ಟಮಿ ವೈಭವ: ಭಕ್ತಿ–ಸಾಂಸ್ಕೃತಿಕ ವೈವಿಧ್ಯದ ಸಂಗಮ

**ವಿಜಯ ದುಂಬಿ ಸುದ್ದಿ....**

**ಶಿಡ್ಲಘಟ್ಟ: ರೇಷ್ಮೆ ನಗರಿ ಶಿಡ್ಲಘಟ್ಟದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಹಬ್ಬವನ್ನು ಅತ್ಯಂತ ಭಕ್ತಿ, ಸಡಗರ ಹಾಗೂ ಸಾಂಸ್ಕೃತಿ–ಕ ವೈಭವದೊಂದಿಗೆ ಸಂಭ್ರಮದಿಂದ ಆಚರಿಸಲಾಯಿತು. ನಗರದ ಶ್ರೀ ಕೃಷ್ಣ ದೇವಾಲಯದ ಆವರಣದಲ್ಲಿ ಜರುಗಿದ ಧಾರ್ಮಿಕ ಕಾರ್ಯಕ್ರಮದಲ್ಲಿ ಕ್ಷೇತ್ರದ ಶಾಸಕ ಬಿ.ಎನ್. ರವಿಕುಮಾರ್ ಭಾಗವಹಿಸಿ, ಶ್ರೀ ಕೃಷ್ಣನಿಗೆ ವಿಶೇಷ ಪೂಜೆ ಸಲ್ಲಿಸಿ ತಾಲೂಕಿನ ಜನತೆಗೆ ಜನ್ಮಾಷ್ಟಮಿಯ ಶುಭಾಶಯ ಕೋರಿದರು.**

ತಾಲೂಕಿನ ವಿವಿಧ ಭಾಗಗಳಿಂದ ಸಮುದಾಯದ ಬಂಧುಗಳು ಪಲ್ಲಕ್ಕಿಗಳೊಂದಿಗೆ ಕೃಷ್ಣನ ಮೂರ್ತಿಗಳನ್ನು ಹೊತ್ತು ದೇವಾಲಯದ ಆವರಣ–ಕ್ಕೆ ಆಗಮಿಸಿದರು. ವಿಶೇಷವಾಗಿ ಅಲಂಕರಿಸಿದ ರಥದಲ್ಲಿ ಶ್ರೀ ಕೃಷ್ಣನ ವಿಗ್ರಹವನ್ನು ಪ್ರತಿಷ್ಠಾಪಿಸಿ, ವೇದಮಂತ್ರ ಘೋಷಗಳ ನಡುವೆ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ದೇವಾಲಯದ ಆವರಣದಲ್ಲಿ ಭಜನೆ, ನಾಮಸ್ಮರಣೆ ಹಾಗೂ 'ಜೈ ಶ್ರೀ ಕೃಷ್ಣ', 'ಗೋವಿಂದಾ... ಗೋವಿಂದಾ' ಜಯಘೋಷಗಳು ಮೊಳಗಿದವು. ಮೆರವಣಿಗೆಯಲ್ಲಿ ಗೊಂಬೆ ಕುಣಿತ, ತಮಟೆ ವಾದ್ಯಗಳ ಅಬ್ಬರ ಹಾಗೂ ವಿವಿಧ ಜಾನಪದ ಕಲಾತಂಡಗಳ



ಪ್ರದರ್ಶನಕ್ಕೆ ಭಕ್ತಾದಿಗಳು ಕುಣಿದು ಕುಪ್ಪಳಿಸಿದರು. ಹಬ್ಬದ ಸವಿನೆನಪಿಗಾಗಿ ಮಕ್ಕಳಿಗೆ ಆಯೋಜಿಸಲಾಗಿದ್ದ ಕೃಷ್ಣ?ರಾಧೆ ವೇಷಭೂಷಣ ಸ್ಪರ್ಧೆಯು ಸಾರ್ವಜನಿಕರ ಮನಸೆಳೆಯಿತು.

ಬಣ್ಣ ಬಣ್ಣದ ಉಡುಪುಗಳಲ್ಲಿ ಕಂಗೊಳಿಸಿದ ಪುಟ್ಟ ಮಕ್ಕಳು ಶ್ರೀಕೃಷ್ಣ ಮತ್ತು ರಾಧೆಯರ ಲೀಲೆಯನ್ನು ನೆನಪಿಸಿದರು. ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾವಿರಾರು ಭಕ್ತಾದಿಗಳು ಶಿಸ್ತಿನ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಆಯೋಜಕರಿಂದ ಭಕ್ತಾದಿಗಳಿಗೆ ಅನ್ನದಾನ ಹಾಗೂ ಪ್ರಸಾದ ವಿನಿಯೋಗದ ವ್ಯವಸ್ಥೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಗಗನ ಸಿಂಧು, ಬಿಜೆಪಿ ಜಿಲ್ಲಾಧ್ಯಕ್ಷ ಸೀಕಲ್ ರಾಮಚಂದ್ರಗೌಡ, ಕಾಂಗ್ರೆಸ್ ಮುಖಂಡ ರಾಜೀವ್ ಗೌಡ, ಕಾಂಗ್ರೆಸ್ ಮುಖಂಡ ಪುಟ್ಟು ಆಂಜಿನಪ್ಪ, ಸಮಾಜ ಸೇವಕ ಬೀರಪ್ಪನಹಳ್ಳಿ ನರಸಿಂಹಮೂರ್ತಿ, ವಕೀಲರ ಸಂಘದ ಅಧ್ಯಕ್ಷ ನಾರಾಯಣಸ್ವಾಮಿ, ಯಾದವ ಸಂಘದ ಅಧ್ಯಕ್ಷ ಲಕ್ಷ್ಮಣ್, ಉಪಾಧ್ಯಕ್ಷ ನರಸಿಂಹಮೂರ್ತಿ, ಖಜಾಂಚಿ ನವೀನ್ ಕುಮಾರ್, ಯುವಕರ ಸಂಘದ ಅಧ್ಯಕ್ಷ ವಿಜಯ್ ಕುಮಾರ್, ಮಾಜಿ ನಗರಸಭೆ ಸದಸ್ಯರಾದ ಮುನಿರಾಜು, ನಾರಾಯಣಸ್ವಾಮಿ ಸೇರಿದಂತೆ ಹಲವು ಪ್ರಮುಖ ಮುಖಂಡರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾವಿರಾರು ಸಾರ್ವಜನಿಕರು ಭಾಗವಹಿಸಿದ್ದರು. ಸಮುದಾಯದ ಬಂಧುಗಳ ಒಗ್ಗಟ್ಟು, ಭಕ್ತಿ ಹಾಗೂ ಸೌಹಾರ್ದತೆಯ ಸಂಗಮವಾಗಿ ಶಿಡ್ಲಘಟ್ಟದ ಈ ಬಾರಿಯ ಕೃಷ್ಣ ಜನ್ಮಾಷ್ಟಮಿ ಆಚರಣೆ ಅಭೂತಪೂರ್ವ ಯಶಸ್ಸು ಕಂಡಿತು.

VIJYA DUMBI KANNADA DAILY EDITED,PUBLISHED AND OWNED BY,VIJYA PRiNTED AT MANJESHA,U#74,4TH,MAIN,7TH,CROSS,NEARCHOWDESHARI TEMPALE KAVERINAGARA,MAHADEVAPURA,POST BANGALORU KARNATAKAPUBLISHED Hosapalya Byrasandra Modalakote Po , Nelamangala to bengaluru rurala Karnataka 562123 EDITOR VIJYA